# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಕನ್ನಡ ದಿನಪತ್ರಿಕೆಗಳ ತುಣುಕು

## 21-01-2021



# ಪರಿವಿಡಿ

1. ಪ್ರಜಾ ವಾಣಿ
2. ಕನ್ನಡ ಪ್ರಭ
3. ವಿಜಯ ಕರ್ನಾಟಕ
4. ವಿಜಯ ವಾಣಿ
5. ವಿಶ್ವ ವಾಣಿ
6. ಉದಯ ವಾಣಿ
7. ಸಂಯುಕ್ರ ಕರ್ನಾಟಕ
8. ಹೊಸ ದಿಗಂತ
9. ವಾರ್ತಾ ಭಾರತಿ
10. ಜಯಕಿರಣ
11. ಸಂಜೆ ವಾಣಿ
12. ಈ ಸಂಜೆ

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

### ಗ್ರಾ.ಪಂ – ಬಿಬಿಎಂಪಿ ಹಗ್ಗಜಗ್ಗಾಟದಲ್ಲಿ ಮರೆಯಾಗುತ್ತಿದೆ ಜಲಮೂಲ

# ಕೊಳೆತು ನಾರುತ್ತಿದೆ ಕನ್ನಲ್ಲಿ ಕೆರೆ

• ಚಿಕ್ಕರಾಮು



ಕಲುಷಿತಗೊಂಡಿರುವ ಕನ್ನಲ್ಲಿ ಕೆರೆ

**ರಾಜರಾಜೇಶ್ವರಿನಗರ:** ಕೊಡಿಗೇಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಕನ್ನಲ್ಲಿ ಕೆರೆ ಸಾಂಕ್ರಾಮಿಕ ರೋಗಗಳ ಉತ್ಪಾದನಾ ಕೇಂದ್ರದಂತಾಗಿದೆ. 60 ಎಕರೆ ಪ್ರದೇಶದಲ್ಲಿರುವ ಈ ಕೆರೆಯಲ್ಲಿ ಕೊಳೆ ಗಿಡಗಳು, ಜೊಂಡು, ಹುಲ್ಲು, ಗಿಡ-ಗಂಟಿಗಳು ಬೆಳೆದಿದ್ದು, ನೀರೇ ಕಾಣುತ್ತಿಲ್ಲ.

ಕನ್ನಲ್ಲಿ ಗ್ರಾಮವು ಐತಿಹಾಸಿಕ, ಧಾರ್ಮಿಕ ಸ್ಥಳವಾಗಿದೆ. ನೂರಾರು ವರ್ಷಗಳ ಪುರಾಣ ಪ್ರಸಿದ್ಧ ಶ್ರೀ ವೀರಭದ್ರಸ್ವಾಮಿ ದೇವಸ್ಥಾನ ಈ ಕೆರೆಯ ಬದಿಯಲ್ಲಿದೆ.

ಕೊಡಿಗೇಹಳ್ಳಿ, ಕನ್ನಲ್ಲಿ ಮತ್ತು ಚಿಕ್ಕಕೊಡಿಗೇಹಳ್ಳಿ, ಬ್ರಹ್ಮದೇವರ ಗುಡ್ಡ ಸುತ್ತಮುತ್ತಲ ಬಡಾವಣೆ ಮತ್ತು ಮಾಚೋಹಳ್ಳಿ ಕೈಗಾರಿಕಾ ಪ್ರದೇಶದಲ್ಲಿರುವ ಕೈಗಾರಿಕೆಗಳ ತ್ಯಾಜ್ಯ, ರಾಸಾಯನಿಕ, ಒಳಚರಂಡಿ ನೀರು ನೇರವಾಗಿ ಕೆರೆ ಸೇರುತ್ತಿದೆ. ಸತ್ತ ಪ್ರಾಣಿ ಪಕ್ಷಿಗಳ ಕಳೇಬರ, ಮಾಂಸ-ಮೂಳೆ, ಆಸ್ಪತ್ರೆ ತ್ಯಾಜ್ಯ, ಕಲ್ಮಶ, ಘನತ್ಯಾಜ್ಯ, ಕಸದ ಚೀಲ, ಕಟ್ಟಡ ಸಾಮಗ್ರಿಗಳನ್ನು ಸುರಿಯಲಾಗುತ್ತಿದೆ.

ಕೆರೆಯ ಸುತ್ತಮುತ್ತ ನಾಡಪ್ರಭು ಕೆಂಪೇಗೌಡ ಬಡಾವಣೆ (ಬಿಡಿಎ ಬಡಾವಣೆ), ಖಾಸಗಿ ಬಡಾವಣೆಗಳು ತಲೆ ಎತ್ತುತ್ತಿವೆ. ಈ ಬಡಾವಣೆಗಳು ತಲೆ ಎತ್ತುವ ಮೊದಲು ಕೆರೆಯ ನೀರು ಪರಿಶುದ್ಧವಾಗಿತ್ತು. ಕಾಡುಪ್ರಾಣಿಗಳು, ಪಶುಪಕ್ಷಿಗಳು, ನಾಗರಿಕರು ಈ ಕೆರೆಯ ನೀರನ್ನು ಕುಡಿಯಲು ಬಳಸುತ್ತಿದ್ದರು. ವ್ಯವಸಾಯಕ್ಕೂ ಬಳಸಲಾಗುತ್ತಿತ್ತು. ಈಗ ಕೆರೆಯ ನೀರು ಕಪ್ಪು ಬಣ್ಣಕ್ಕೆ ತಿರುಗಿದೆ ಎಂದು ಗ್ರಾಮಸ್ಥರು ಹೇಳುತ್ತಾರೆ.

**ಕಲ್ಯಾಣಿ ನಿರ್ಮಾಣ:** ಹಲವು ವರ್ಷಗಳ ಹಿಂದೆ ಮಳೆಯಿಲ್ಲದೆ ಕೆರೆ ಸಂಪೂರ್ಣವಾಗಿ ಬತ್ತಿಹೋಗಿತ್ತು. ಜಲಚರಗಳಿಗೆ, ಪಕ್ಷಿಗಳಿಗೆ, ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆಯಾದಾಗ ಶ್ರೀವೀರಭದ್ರಸ್ವಾಮಿ ವೀರಶೈವ ನಿತ್ಯಾನ್ನ ದಾಸೋಹ ಸಮಿತಿ ಅಧ್ಯಕ್ಷ ಡಾ.ಎಸ್.ಶಾಂತರಾಜು ಅವರು ಎರಡು ಕಲ್ಯಾಣಿ ನಿರ್ಮಿಸಿ ನೀರು ಸಂಗ್ರಹಿಸಲು ಅನುವು ಮಾಡಿಕೊಟ್ಟಿದ್ದರು.

ಈಗ ಕೆರೆಗೆ ಕೊಳೆತ ನೀರು ಸೇರುತ್ತಿರುವುದರಿಂದ ಕಲ್ಯಾಣಿಯ ನೀರು ಕಲುಷಿತಗೊಂಡಿದೆ. ನೆಲಹಾಸು ಹಾಳಾಗಿ ಹೊಸದಾಗಿ ನಿರ್ಮಿಸಲಾದ ಉದ್ಯಾನ ಸಂಪೂರ್ಣ ಹಾಳಾಗಿದೆ. ಪಾಚಿಕಟ್ಟಿ ದುರ್ವಾಸನೆ ಬೀರುತ್ತಿರುವುದರಿಂದ ಮಕ್ಕಳು ಹಾಗೂ ನಾಗರಿಕರು ಅಪಾಯಕ್ಕೆ ಸಿಲುಕುತ್ತಾರೆ ಎಂದು ಮುನ್ನೆಚ್ಚರಿಕೆಯ ಕ್ರಮವಾಗಿ ಉದ್ಯಾನದ ಸುತ್ತ ತಂತಿಬೇಲಿ ಹಾಕಲಾಗಿದೆ.

**ಭರವಸೆ ಈಡೇರಿಲ್ಲ:** 'ಕೆರೆ ರಕ್ಷಿಸುತ್ತೇವೆ. ಒತ್ತುವರಿ ತೆರವುಗೊಳಿಸುತ್ತೇವೆ, ಒಳಚರಂಡಿ ನೀರು ಸೇರದಂತೆ ಕ್ರಮ ಕೈಗೊಳ್ಳುತ್ತೇವೆ ಎಂದು ಅಧಿಕಾರಿಗಳು ಭರವಸೆ ನೀಡುತ್ತಾರೆ. ಆದರೆ, ಮಾತಿನಂತೆ ಅಭಿವೃದ್ಧಿ ಕಾರ್ಯ ಕೈಗೊಳ್ಳುವುದಿಲ್ಲ. ಪರಿಸ್ಥಿತಿ ಇದೇ ರೀತಿ ಮುಂದುವರಿದರೆ ಮುಂದಿನ ಪೀಳಿಗೆಗೆ ಉಳಿಯುವುದೇ ಇಲ್ಲ' ಎಂದು ಡಾ.ಎಸ್. ಶಾಂತರಾಜು ಆತಂಕ ವ್ಯಕ್ತಪಡಿಸಿದರು.



ಶಾಂತರಾಜು

ಗ್ರಾಮ ಪಂಚಾಯಿತಿ ಸದಸ್ಯ ಸಿದ್ದಲಿಂಗಸ್ವಾಮಿ, 'ಕೆರೆಗೆ ನೀರು ಹರಿದು ಬರಲು ಸಹಕಾರಿಯಾಗಿದ್ದ ನೀರುಗಾಲುವೆಯನ್ನೇ ಮುಚ್ಚಿಹಾಕಿದ್ದಾರೆ. ಮಾಚೋಹಳ್ಳಿ ಕೈಗಾರಿಕೆ ಪ್ರದೇಶಗಳಿಂದ ರಾಸಾಯನಿಕ ನೀರು ಹರಿದು ಬರುತ್ತಿದ್ದು ಕೊಳಚೆ ನೀರು ನಿರ್ಬಂಧಕ್ಕೆ ಯಾವುದೇ ಅಧಿಕಾರಿಗಳು ಗಮನ ಹರಿಸುತ್ತಿಲ್ಲ' ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಪ್ರಜಾವಾಣಿ ವಿಶೇಷ

## 'ಅನುದಾನ ಬಿಡುಗಡೆಯಾಗಿಲ್ಲ'

'ಕೆರೆ ಸುತ್ತಲೂ ತಂತಿಬೇಲಿ ನಿರ್ಮಾಣ ಮಾಡಲು ₹15 ಕೋಟಿ ಅನುದಾನ ನೀಡುವಂತೆ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಲಾಗಿದೆ. ಆದರೆ ಈವರೆಗೆ ಹಣ ಬಿಡುಗಡೆಯಾಗಿಲ್ಲ' ಎಂದು ಬಿಬಿಎಂಪಿ ಕೆರೆ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ನಿತ್ಯಾ ಹೇಳಿದರು.

'ಕೆರೆಗೆ ತ್ಯಾಜ್ಯ, ಕಸ ಮತ್ತಿತರ ಪ್ರಾಣಿಪಕ್ಷಿಗಳ ಕಳೇಬರ ಸುರಿಯದಂತೆ ತಡೆಗಟ್ಟಬೇಕಾದ ಕೆಲಸ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಬರುತ್ತದೆ. ಈ ಬಗ್ಗೆ ಅವರಿಗೆ ಪತ್ರ ಬರೆದಿದ್ದರೂ ಗ್ರಾಮಪಂಚಾಯಿತಿ ಅಧಿಕಾರಿಗಳು ಯಾವುದೇ ಕ್ರಮ ತೆಗೆದುಕೊಂಡಿಲ್ಲ' ಎಂದರು.

## 'ಬಿಬಿಎಂಪಿಗೆ ಹಸ್ತಾಂತರಿಸಲಾಗಿದೆ'

'ಕೆರೆಯನ್ನು ಬಿಬಿಎಂಪಿಗೆ ಹಸ್ತಾಂತರ ಮಾಡಲಾಗಿದೆ. ಮೂರು ವರ್ಷದ ಹಿಂದೆ ಮೀನುಗಾರಿಕೆ ನಡೆಸಲು ಒಂದು ವರ್ಷದ ಅವಧಿಗೆ ಪರವಾನಗಿಯನ್ನು ನೀಡಲಾಗಿತ್ತು. ಅದಾದ ನಂತರ ನಾವು ಯಾವುದೇ ಪರವಾನಗಿಯನ್ನು ಯಾವುದೇ ಗುತ್ತಿಗೆದಾರರಿಗೂ ನೀಡಿಲ್ಲ' ಎಂದು ಕೊಡಿಗೇಹಳ್ಳಿ ಪಂಚಾಯಿತಿ ಅಧಿಕಾರಿ ಭಾಗೀರಥಿ ಹೇಳಿದರು.

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

# 5 ದಿನಗಳಲ್ಲಿ 1.17 ಲಕ್ಷ ಮಂದಿಗೆ ಲಸಿಕೆ

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ಕೋವಿಡ್ ಲಸಿಕೆ ಪಡೆದುಕೊಳ್ಳಲು ಕೆಲವರು ಗೈರಾದರೂ ಕೇವಲ ಐದು ದಿನಗಳ ಅವಧಿಯಲ್ಲಿ ರಾಜ್ಯದಲ್ಲಿ 1.17 ಲಕ್ಷ ಮಂದಿ ಆರೋಗ್ಯ ಕಾರ್ಯಕರ್ತರು ಲಸಿಕೆ ಹಾಕಿಸಿಕೊಂಡಿದ್ದಾರೆ. ಇದರಿಂದಾಗಿ ಲಸಿಕೆ ವಿತರಣೆಯಲ್ಲಿ ಒಂದು ಲಕ್ಷದ ಗಡಿ ದಾಟಿದ ಮೊದಲ ರಾಜ್ಯ ಎಂಬ ಹೆಗ್ಗಳಿಕೆಗೆ ಕರ್ನಾಟಕ ಭಾಜನವಾಗಿದೆ.

ಕೋವಿಡ್ ಲಸಿಕೆ ಪಡೆಯುವಿಕೆಗೆ ಬುಧವಾರ ನಿಗದಿಪಡಿಸಲಾಗಿದ್ದ ಫಲಾನುಭವಿಗಳಲ್ಲಿ ಶೇ 55 ರಷ್ಟು ಮಂದಿ ಲಸಿಕೆ ಪಡೆದುಕೊಂಡಿದ್ದಾರೆ. ಉಳಿದವರು ನಾನಾ ಕಾರಣಗಳಿಂದ ಗೈರಾಗಿದ್ದಾರೆ. ಲಸಿಕೆ ವಿತರಣೆಗೆ 853 ಕೇಂದ್ರಗಳನ್ನು ಗುರುತಿಸಲಾಗಿತ್ತು. ಅದರಲ್ಲಿ 830 ಕೇಂದ್ರಗಳಲ್ಲಿ ಲಸಿಕೆ ವಿತರಣೆ ನಡೆದಿದೆ. 62,772 ಫಲಾನುಭವಿಗಳಲ್ಲಿ 34,583 ಮಂದಿ ಆರೋಗ್ಯ ಕಾರ್ಯಕರ್ತರು ಲಸಿಕೆ ಪಡೆದುಕೊಂಡಿದ್ದಾರೆ. ಐದನೇ ದಿನ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಅಭಿಯಾನವನ್ನು ನಡೆಸಲಾಗಿತ್ತು.

ಚಿಕ್ಕಮಗಳೂರು (ಶೇ 73), ತುಮಕೂರು (ಶೇ 68), ವಿಜಯಪುರ (ಶೇ 66), ಉಡುಪಿ (ಶೇ 66), ಕೊಡಗು (ಶೇ 66), ಯಾದಗಿರಿ (ಶೇ 65) ಜಿಲ್ಲೆಯಲ್ಲಿ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ.

ಧಾರವಾಡ (ಶೇ 36), ಕೊಪ್ಪಳ (ಶೇ 41), ಬಾಗಲಕೋಟೆ (ಶೇ 43), ಬೆಂಗಳೂರು ಗ್ರಾಮಾಂತರ (ಶೇ 44), ಬೆಂಗಳೂರು ನಗರ (ಶೇ 46) ಜಿಲ್ಲೆಯಲ್ಲಿ ಅರ್ಧಕ್ಕೂ ಅಧಿಕ ಮಂದಿ ಗೈರಾಗಿದ್ದರು.

## ‘ಕ್ವಾರಂಟೈನ್ ಅವಧಿಯಲ್ಲಿ ವೇತನ ಸಹಿತ ರಜೆ’

**ಬೆಂಗಳೂರು:** ‘ಸಂಘಟಿತ ಮತ್ತು ಅಸಂಘಟಿತ ವಲಯಗಳ ನೌಕರರು ಕೋವಿಡ್ ದೃಢಪಟ್ಟು ಕ್ವಾರಂಟೈನ್‌ನಲ್ಲಿದ್ದರೆ ಪೂರ್ಣ ಪ್ರಮಾಣದ ವೇತನ ಸಹಿತ ರಜೆ ಪಡೆಯಲು ಅರ್ಹರಾಗಿದ್ದಾರೆ’ ಎಂದು ಹೈಕೋರ್ಟ್‌ಗೆ ರಾಜ್ಯ ಸರ್ಕಾರ ಮಾಹಿತಿ ನೀಡಿದೆ.

ಲಾಕ್‌ಡೌನ್ ಮಾರ್ಗಸೂಚಿ ಜಾರಿಗೊಳಿಸಿದ ಅವಧಿಯಿಂದ ಈ ನಿಯಮ ಅನ್ವಯವಾಗಲಿದೆ. ಈ ಕುರಿತು ಜ.18ರಂದು ಹೊರಡಿಸಿರುವ ಆದೇಶವನ್ನು ಸರ್ಕಾರದ ಪರ ವಕೀಲರು ನ್ಯಾಯಾಲಯಕ್ಕೆ ಸಲ್ಲಿಸಿದರು.

ಈ ಸಂಬಂಧ ಆಲ್ ಇಂಡಿಯಾ ಟ್ರೇಡ್ ಯೂನಿಯನ್ ಕಾಂಗ್ರೆಸ್ (ಎಐಟಿಯುಸಿ) ಸಲ್ಲಿಸಿದ್ದ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ಎ.ಎಸ್.ಓಕಾ ನೇತೃತ್ವದ ವಿಭಾಗೀಯ ಪೀಠ ವಿಲೇವಾರಿ ಮಾಡಿತು.

ಕೋವಿಡ್ ದೃಢಪಟ್ಟ ಕಾರ್ಮಿಕರ ಕ್ವಾರಂಟೈನ್ ಅವಧಿಯನ್ನು ಅನಧಿಕೃತ ಗೈರು ಹಾಜರಿ ಎಂದು ಪರಿಗಣಿಸಿ ವೇತನ ಕಡಿತಗೊಳಿಸಲಾಗುತ್ತಿದೆ ಎಂದು ಎಐಟಿಯುಸಿ ಆರೋಪಿಸಿತ್ತು.

### ರಾಜ್ಯದಲ್ಲಿ ಲಸಿಕೆ ಪಡೆದವರ ವಿವರ

| ದಿನಾಂಕ | ಕೇಂದ್ರಗಳು | ದಿನದ ಫಲಾನುಭವಿಗಳು | ಲಸಿಕೆ ಪಡೆದವರು | ಶೇಕಡ (%) |
|---|---|---|---|---|
| ಜ.16 | 243 | 21,426 | 13,609 | 63 |
| ಜ.17 | 67 | 6,349 | 3,721 | 59 |
| ಜ.18 | 1,006 | 81,326 | 50,219 | 62 |
| ಜ.19 | 346 | 32,166 | 15,235 | 47 |
| ಜ.20 | 830 | 62,772 | 34,583 | 55 |

ಕೋವಿಡ್ ಲಸಿಕೆಯಿಂದ ಅಡ್ಡ ಪರಿಣಾಮ ಕಾಣಿಸಿಕೊಂಡ ಯಾವುದೇ ಪ್ರಮುಖ ಪ್ರಕರಣ ವರದಿಯಾಗಿಲ್ಲ ಎಂದು ಆರೋಗ್ಯ ಇಲಾಖೆ ತಿಳಿಸಿದೆ.

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

## ಅನಧಿಕೃತ ಧಾರ್ಮಿಕ ಕಟ್ಟಡ ಗುರುತಿಸಲು ಸಮೀಕ್ಷೆ

# 3 ದಿನಗಳ ಗಡುವು: ಆಯುಕ್ತ

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಯ ರಸ್ತೆ, ಪಾದಚಾರಿ ಮಾರ್ಗ, ಉದ್ಯಾನ, ಆಟದ ಮೈದಾನ, ಸರ್ಕಾರಿ ಜಾಗ ಸೇರಿದಂತೆ ಸಾರ್ವಜನಿಕ ಸ್ಥಳಗಳನ್ನು ಅತಿಕ್ರಮಿಸಿ ಅನಧಿಕೃತವಾಗಿ ನಿರ್ಮಿಸಿರುವ ಮಂದಿರ, ಮಸೀದಿ, ಚರ್ಚ್, ಗುರುದ್ವಾರ ಮೊದಲಾದ ಧಾರ್ಮಿಕ ಕಟ್ಟಡಗಳನ್ನು ಸಮೀಕ್ಷೆ ಮಾಡಿ ಮೂರು ದಿನಗಳಲ್ಲಿ ಸಮಗ್ರ ವರದಿ ನೀಡಬೇಕೆಂದು ಬಿಬಿಎಂಪಿ ಆಯುಕ್ತ ಎನ್.ಮಂಜುನಾಥ ಪ್ರಸಾದ್ ಅಧಿಕಾರಿಗಳಿಗೆ ಸೂಚಿಸಿದರು.

ಅನಧಿಕೃತ ಧಾರ್ಮಿಕ ಕಟ್ಟಡಗಳನ್ನು ಗುರುತಿಸುವ ಸಂಬಂಧ ಆಯುಕ್ತರು ಬುಧವಾರ ವಿಡಿಯೊ ಕಾನ್ಫರೆನ್ಸ್ ಮೂಲಕ ಅಧಿಕಾರಿಗಳ ಸಭೆ ನಡೆಸಿದರು.

'ಸಾರ್ವಜನಿಕ ಸ್ಥಳಗಳಲ್ಲಿ ಅನಧಿಕೃತ ಧಾರ್ಮಿಕ ಕಟ್ಟಡಗಳನ್ನು ನಿರ್ಮಿಸಿರುವ ಬಗ್ಗೆ 2009ರಲ್ಲಿ ಸುಪ್ರೀಂ ಕೋರ್ಟ್ ಸಾರ್ವಜನಿಕ ಹಿತಾಸಕ್ತಿ ದಾವೆ ದಾಖಲಾಗಿತ್ತು. ಇಂತಹ ಧಾರ್ಮಿಕ ಕಟ್ಟಡಗಳ ಸಮೀಕ್ಷೆ ನಡೆಸುವಂತೆ ಸುಪ್ರೀಂ ಕೋರ್ಟ್ ಆದೇಶ ಮಾಡಿದೆ. 2009ರ ಸೆ. 29ರ ನಂತರ ಸಾರ್ವಜನಿಕ ಸ್ಥಳಗಳಲ್ಲಿ ಯಾವುದೇ ರೀತಿಯ ಧಾರ್ಮಿಕ ಕಟ್ಟಡಗಳನ್ನು ನಿರ್ಮಿಸಲು ಅವಕಾಶವಿಲ್ಲ. 2009ಕ್ಕೆ ಮುನ್ನ ನಿರ್ಮಿಸಿರುವ ಅನಧಿಕೃತ ಧಾರ್ಮಿಕ ಕಟ್ಟಡಗಳನ್ನು ಬೇರೆಡೆ ಸ್ಥಳಾಂತರಗೊಳಿಸಲು ಅಥವಾ ತೆರವುಗೊಳಿಸಲು ಕ್ರಮ ಕೈಗೊಳ್ಳಬೇಕಿದೆ' ಎಂದು ಆಯುಕ್ತರು ತಿಳಿಸಿದರು.

'ಸಾರ್ವಜನಿಕ ಸ್ಥಳಗಳಲ್ಲಿ ಅನಧಿಕೃತವಾಗಿ ಧಾರ್ಮಿಕ ಕಟ್ಟಡ ನಿರ್ಮಿಸುವುದು ಗಂಭೀರ ವಿಚಾರ. ಇದೇ 28ರಂದು ಈ ವಿಚಾರವಾಗಿ ಹೈಕೋರ್ಟ್‌ನಲ್ಲಿ ವಿಚಾರಣೆ ನಡೆಯಲಿದ್ದು, ನಿಖರವಾದ ಮಾಹಿತಿ ನೀಡಬೇಕಿದೆ. ಯಾವ ಅಧಿಕಾರಿಯೂ ಈ ಸಮೀಕ್ಷೆಯನ್ನು ಕಡೆಗಣಿಸುವಂತಿಲ್ಲ. 2009ರ ನಂತರ ನಿರ್ಮಿಸಿರುವ ಧಾರ್ಮಿಕ ಕಟ್ಟಡಗಳಿಗೆ ಇದೇ 27ರೊಳಗೆ ನೋಟೀಸ್ ಜಾರಿ ಮಾಡಬೇಕು. ಅಂತಹ ಕಟ್ಟಡ ನಿರ್ಮಿಸಿದವರಿಂದ 1 ವಾರದೊಳಗೆ ಸಮಜಾಯಿಷಿ ಪಡೆಯಬೇಕು' ಎಂದು ಸೂಚಿಸಿದರು.

ಧಾರ್ಮಿಕ ಕಟ್ಟಡಗಳ ಸಮೀಕ್ಷೆಗೆ ಎಲ್ಲಾ ಅಧಿಕಾರಿಗಳು ಒಂದೇ ಮಾದರಿ ಅನುಸರಿಸಬೇಕು. ಕಟ್ಟಡ ನಿರ್ಮಿಸಿದ ಅವಧಿ, ಅವುಗಳ ವಿಸ್ತೀರ್ಣದ ಮಾಹಿತಿಯನ್ನೂ ಉಲ್ಲೇಖಿಸಬೇಕು. ಅವುಗಳ ಛಾಯಾಚಿತ್ರಗಳನ್ನೂ ಲಗತ್ತಿಸಬೇಕು. ಹೈಕೋರ್ಟ್‌ಗೆ ವರದಿ ಸಲ್ಲಿಸಿದ ನಂತರ ಅನಧಿಕೃತ ಧಾರ್ಮಿಕ ಕಟ್ಟಡಗಳನ್ನು ಪೊಲೀಸ್ ಭದ್ರತೆಯೊಂದಿಗೆ ತೆರವುಗೊಳಿಸಲು ಕ್ರಮವಹಿಸಬೇಕು ಎಂದು ತಿಳಿಸಿದರು.

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

# ಬಿಬಿಎಂಪಿ ಆಯುಕ್ತ ಮಂಜುನಾಥ ಪ್ರಸಾದ್‌ಗೆ ಪ್ರಶಸ್ತಿ

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ಚುನಾವಣಾ ಆಯೋಗವು ನೀಡುವ 2021ನೇ ಸಾಲಿನ ರಾಜ್ಯ ಮಟ್ಟದ ಪ್ರಶಸ್ತಿಗೆ ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಬಿಬಿಎಂಪಿ ಆಯುಕ್ತ ಎನ್.ಮಂಜುನಾಥ ಪ್ರಸಾದ್



ಆಯ್ಕೆಯಾಗಿದ್ದಾರೆ.

ನಗರದ ಪುರಭವನದಲ್ಲಿ ಇದೇ 25ರಂದು ಏರ್ಪಡಿಸಿರುವ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ.

# ಅಕ್ರಮ ಧಾರ್ಮಿಕ ಕಟ್ಟಡಗಳ ಸಮೀಕ್ಷೆಗೆ 3 ದಿನ ಗಡುವು

## 28ಕ್ಕೆ ಹೈಕೋರ್ಟಲ್ಲಿ ಅರ್ಜಿ ವಿಚಾರಣೆ ಹಿನ್ನೆಲೆ | ವರದಿ ಕೇಳಿದ ಆಯುಕ್ತ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ರಸ್ತೆ, ಪಾದಚಾರಿ ಮಾರ್ಗ, ಉದ್ಯಾನ, ಮೈದಾನ, ಸರ್ಕಾರಿ ಜಾಗ ಸೇರಿದಂತೆ ಸಾರ್ವಜನಿಕ ಸ್ಥಳಗಳನ್ನು ಒತ್ತುವರಿ ಮಾಡಿಕೊಂಡು ನಿರ್ಮಿಸಿರುವ ಮಂದಿರ, ಮಸೀದಿ, ಚರ್ಚ್, ಗುರುದ್ವಾರ ಸೇರಿದಂತೆ ಧಾರ್ಮಿಕ ಕಟ್ಟಡಗಳ ಸಮೀಕ್ಷೆ ಮಾಡಿ 3 ದಿನಗಳ ಒಳಗೆ ವರದಿ ನೀಡುವಂತೆ ಬಿಬಿಎಂಪಿ ಆಯುಕ್ತ ಎನ್.ಮಂಜುನಾಥ ಪ್ರಸಾದ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಬಿಬಿಎಂಪಿಯ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಧಾರ್ಮಿಕ ಕಟ್ಟಡ ನಿರ್ಮಾಣ ಮಾಡಿರುವ ಸಂಬಂಧ ಬುಧವಾರ ವಿಶೇಷ ಆಯುಕ್ತರು, ಜಂಟಿ ಆಯುಕ್ತರು ಹಾಗೂ ಇತರೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಬಳಿಕ ಮಾತನಾಡಿದ ಆಯುಕ್ತರು, ಸಾರ್ವಜನಿಕ ಸ್ಥಳಗಳಲ್ಲಿ ಅನಧಿಕೃತ ಧಾರ್ಮಿಕ ಕಟ್ಟಡಗಳನ್ನು ನಿರ್ಮಿಸುವಂತಿಲ್ಲ ಎಂದು ಸುಪ್ರೀಂ ಕೋರ್ಟ್ 2009ರಲ್ಲಿಯೇ ಆದೇಶ ಮಾಡಿದೆ. ನಗರದಲ್ಲಿ ಅನಧಿಕೃತವಾಗಿ ಧಾರ್ಮಿಕ ಕಟ್ಟಡ ನಿರ್ಮಾಣ ಕುರಿತು ಜ.28ರಂದು ಹೈಕೋರ್ಟ್‌ನಲ್ಲಿ ವಿಚಾರಣೆ ಇರುವ ಕಾರಣ ಕೋರ್ಟ್‌ಗೆ ನಿಖರವಾದ ಮಾಹಿತಿ ನೀಡಲು ಮೂರು ದಿನದಲ್ಲಿ ಸಮೀಕ್ಷೆ ನಡೆಸಿ ವರದಿ ನೀಡುವಂತೆ ಸೂಚಿಸಿದರು.

■ ಸಾರ್ವಜನಿಕರ ಸ್ಥಳದಲ್ಲಿ ನಿರ್ಮಿಸಿದ ಧಾರ್ಮಿಕ ಕಟ್ಟಡಗಳ ಕುರಿತು ಹೈಕೋರ್ಟ್‌ಗೆ ನಿಖರ ಮಾಹಿತಿ ನೀಡಲು ಸಮೀಕ್ಷೆಗೆ ಸೂಚನೆ



ಸಮೀಕ್ಷೆ ನಡೆಸುವಾಗ 2009ರ ಮುನ್ನ ಹಾಗೂ 2009ರ ನಂತರ ನಿರ್ಮಿಸಲಾದ ಧಾರ್ಮಿಕ ಕಟ್ಟಡಗಳನ್ನು ಎಲ್ಲ ವಾರ್ಡ್ ಎಂಜಿನಿಯರ್ ಹಾಗೂ ಕಂದಾಯ ಅಧಿಕಾರಿಗಳು ಸಮರ್ಪಕವಾಗಿ ಸಮೀಕ್ಷೆ ನಡೆಸಿ ವರದಿ ನೀಡಬೇಕು. ಜತೆಗೆ 2009ರ ನಂತರ ನಿರ್ಮಿಸಿದ ಧಾರ್ಮಿಕ ಕಟ್ಟಡಗಳಿಗೆ ಜ.27ರ ಒಳಗೆ ನೋಟಿಸ್ ಜಾರಿ ಮಾಡಿ ಧಾರ್ಮಿಕ ಕಟ್ಟಡಗಳನ್ನು ನಿರ್ಮಿಸಿದವರಿಂದ ಒಂದು ವಾರದಲ್ಲಿ ಸಮಜಾಯಿಷಿ ಪಡೆಯಬೇಕು ಎಂದು ನಿರ್ದೇಶಿಸಿದ್ದಾರೆ. ಹೈಕೋರ್ಟ್‌ಗೆ ವರದಿ ಸಲ್ಲಿಸಿದ ನಂತರ ಪೊಲೀಸ್ ಇಲಾಖೆಯ ಭದ್ರತೆಯೊಂದಿಗೆ ಸಾರ್ವಜನಿಕ ಸ್ಥಳಗಳಲ್ಲಿನ ಅನಧಿಕೃತ ಧಾರ್ಮಿಕ ಕಟ್ಟಡಗಳನ್ನು ತೆರವುಗೊಳಿಸಲು ಕ್ರಮವಹಿಸಬೇಕು ಎಂದು ತಿಳಿಸಿದರು.

ಈ ವೇಳೆ ವಿಶೇಷ ಆಯುಕ್ತರಾದ ಜೆ.ಮಂಜುನಾಥ್, ಬಸವರಾಜ್, ರಾಜೇಂದ್ರ ಚೋಳನ್, ತುಳಸಿ ಮದ್ದಿನೇನಿ, ರವೀಂದ್ರ, ವಲಯಗಳ ಜಂಟಿ ಆಯುಕ್ತರುಗಳು, ಮುಖ್ಯ ಎಂಜಿನಿಯರ್‌ಗಳು ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

ಕನ್ನಡಪ್ರಭ

# ಮಂಜುನಾಥ್ ಪ್ರಸಾದ್ ಉತ್ತಮ ಚುನಾವಣಾಧಿಕಾರಿ

ಬೆಂಗಳೂರು: ರಾಜ್ಯ ಚುನಾವಣಾ ಆಯೋಗದಿಂದ ಕೊಡಮಾಡುವ 2021ನೇ ಸಾಲಿನ ಉತ್ತಮ ಚುನಾವಣಾಧಿಕಾರಿ ಪ್ರಶಸ್ತಿಗೆ ಬಿಬಿಎಂಪಿ ಆಯುಕ್ತ ಹಾಗೂ ಬೆಂಗಳೂರು ನಗರ ಜಿಲ್ಲಾ ಚುನಾವಣಾಧಿಕಾರಿ ಎನ್. ಮಂಜುನಾಥ ಪ್ರಸಾದ್ ಭಾಜನರಾಗಿದ್ದಾರೆ. ಕೊರೋನಾ ಸೋಂಕಿನ ನಡುವೆಯೂ ಅ.9ರಿಂದ ನ.10ರ ವರೆಗೆ ರಾಜರಾಜೇಶ್ವರಿ ನಗರ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯನ್ನು ಮಂಜುನಾಥ ಪ್ರಸಾದ್ ಅವರು ಯಶಸ್ವಿಯಾಗಿ ನಡೆಸಿದ್ದರು. ಈ ಹಿನ್ನೆಲೆಯಲ್ಲಿ ರಾಜ್ಯಮಟ್ಟದ ವಾರ್ಷಿಕ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ರಾಷ್ಟ್ರೀಯ ಮತದಾರರ ದಿನವಾದ ಜ.25ರಂದು ನಗರದ ಪುಟ್ಟಣ್ಣ ಚೆಟ್ಟಿ ಪುರಭವನ (ಟೌನ್‌ಹಾಲ್)ನಲ್ಲಿ ಆಯೋಜಿಸುವ ಕಾರ್ಯಕ್ರಮದಲ್ಲಿ ಪ್ರಶಸ್ತಿ ನೀಡಲಾಗುವುದು ಎಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ, ಉಪ ಮುಖ್ಯ ಚುನಾವಣಾಧಿಕಾರಿ ಕೆ.ಎಂ.ಪ್ರಾಣೇಶ್ ತಿಳಿಸಿದ್ದಾರೆ.



ಕನ್ನಡಪ್ರಭ

**ಉತ್ತಮ ಸ್ಪಂದನೆ** ನಿನ್ನೆ ಸಹ 3803 ಆರೋಗ್ಯ ಸಿಬ್ಬಂದಿಗೆ ಕೊರೋನಾ ಲಸಿಕೆ

# ನಗರದಲ್ಲಿ 20000ಕ್ಕೂ ಹೆಚ್ಚು ಮಂದಿಗೆ ಲಸಿಕೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಬಿಬಿಎಂಪಿ ವ್ಯಾಪ್ತಿಯಲ್ಲಿ ಬುಧವಾರ 79 ಕೋವಿಡ್ ಲಸಿಕಾಕೇಂದ್ರದಲ್ಲಿ3,803ಆರೋಗ್ಯ ಕಾರ್ಯಕರ್ತರು ಲಸಿಕೆ ಪಡೆದುಕೊಂಡಿದ್ದಾರೆ. ಇದರೊಂದಿಗೆ ಒಟ್ಟು ಲಸಿಕೆ ಪಡೆದ ಸಂಖ್ಯೆ 20,336ಕ್ಕೆ ತಲುಪಿದೆ.

ಬೆಂಗಳೂರಿನಲ್ಲಿ ಕೋವಿಡ್ ಲಸಿಕೆ ಅಭಿಯಾನದ ಆರಂಭಗೊಂಡು ಐದನೇ ದಿನವಾದ ಬುಧವಾರ 21 ಬಿಬಿಎಂಪಿ ಹಾಗೂ ಸರ್ಕಾರಿ ಆಸ್ಪತ್ರೆ, 58 ಖಾಸಗಿ ಆಸ್ಪತ್ರೆಗಳ ಲಸಿಕೆ ನೀಡುವ ಅಭಿಯಾನ ನಡೆಯಿತು.

ಬುಧವಾರ1,534ಸರ್ಕಾರಿಹಾಗೂಬಿಬಿಎಂಪಿಯ ಆರೋಗ್ಯ ಕಾರ್ಯಕರ್ತರು ಮತ್ತು 5,302 ಖಾಸಗಿ ಆಸ್ಪತ್ರೆಯ ಸಿಬ್ಬಂದಿ ಸೇರಿದಂತೆ ಒಟ್ಟು 6,836 ಆರೋಗ್ಯ ಕಾರ್ಯಕರ್ತರಿಗೆ ಲಸಿಕೆ ನೀಡುವುದಕ್ಕೆ ಸಿದ್ಧತೆ ಮಾಡಿಕೊಳ್ಳಲಾಗಿತ್ತು. ಈ ಪೈಕಿ 3,803 (ಶೇ.56) ಆರೋಗ್ಯ ಕಾರ್ಯಕರ್ತರು ಮಾತ್ರ ಲಸಿಕೆ ಪಡೆದಿದ್ದಾರೆ.

ಲಸಿಕೆ ಪಡೆದವರ ಪೈಕಿ 1,095 ಸರ್ಕಾರಿ ಮತ್ತು ಬಿಬಿಎಂಪಿಯ ಆರೋಗ್ಯ ಕಾರ್ಯಕರ್ತರು, 2,708 ಖಾಸಗಿ ಆಸ್ಪತ್ರೆಯ ಆರೋಗ್ಯ ಸಿಬ್ಬಂದಿ ಎಂದು ಬಿಬಿಎಂಪಿ ಮಾಹಿತಿ ನೀಡಿದೆ.



ವಿಜಯನಗರ ಆಸ್ಪತ್ರೆಯಲ್ಲಿ ಹಮ್ಮಿಕೊಂಡಿದ್ದ 'ಕೋವಿಶೀಲ್ಡ್ ಲಸಿಕೆ ವಿತರಣಾ' ಶಿಬಿರವನ್ನು ಸಚಿವ ವಿ. ಸೋಮಣ್ಣ ಉದ್ಘಾಟಿಸಿದರು. ಬಿಜೆಪಿ ಯುವ ಮೋರ್ಚಾ ಉಪಾಧ್ಯಕ್ಷ ಡಾ. ಅರುಣ್ ಸೋಮಣ್ಣ, ಶಾಸಕ ರಾಜೀಗೌಡ, ಬಿಬಿಎಂಪಿ ಮಾಜಿ ಸದಸ್ಯ ಡಾ।ಎಸ್. ರಾಜು, ಕುಮಾರ್, ಬಾಬಿ ವೆಂಕಟೇಶ್ ಮತ್ತಿತರರಿದ್ದರು.

**ಬೆಂಗಳೂರಿನಲ್ಲಿ ಈವರೆಗೆ ಲಸಿಕೆ ಪಡೆದವರ ವಿವರ**

| ದಿನಾಂಕ | ಗುರಿ | ಪಡೆದವರು | ಶೇಕಡ |
|---|---|---|---|
| ಜ.16 | 816 | 497 | 60 |
| ಜ.17 | 6,277 | 3,569 | 58 |
| ಜ.18 | 20,226 | 8,489 | 42 |
| ಜ.19 | 10,343 | 3,978 | 38 |
| ಜ.20 | 6,836 | 3,803 | 56 |
| ಒಟ್ಟು | 44,498 | 20,336 | 45.70 |

## 3.86 ಲಕ್ಷ ದಾಟಿದ ಗುಣಮುಖರ ಸಂಖ್ಯೆ

**ಬೆಂಗಳೂರು:** ರಾಜಧಾನಿ ಬೆಂಗಳೂರಿನಲ್ಲಿ ಬುಧವಾರ 260 ಹೊಸ ಕೋವಿಡ್ ಸೋಂಕು ಪ್ರಕರಣ ಪತ್ತೆಯಾಗಿದ್ದು, 303 ಮಂದಿ ಗುಣಮುಖರಾಗಿದ್ದಾರೆ. ಇಬ್ಬರು ಮೃತಪಟ್ಟ ವರದಿಯಾಗಿದೆ.

ಈ ಮೂಲಕ ಈವರೆಗಿನ ಒಟ್ಟು ಸೋಂಕಿತರ ಸಂಖ್ಯೆ 3,95,769 ಏರಿಕೆಯಾಗಿದ್ದು, ಒಟ್ಟು ಗುಣಮುಖರ ಸಂಖ್ಯೆ 3,86,260 ಏರಿಕೆಯಾಗಿದೆ. ಇನ್ನೂ 5,136 ಸಕ್ರಿಯ ಸೋಂಕಿತರಿದ್ದು, ಈ ಪೈಕಿ 74 ಮಂದಿಯ ಆರೋಗ್ಯ ಸ್ಥಿತಿ ಗಂಭೀರಗೊಂಡ ಹಿನ್ನೆಲೆಯಲ್ಲಿ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಆರೋಗ್ಯ ಇಲಾಖೆ ಮಾಹಿತಿ ನೀಡಿದೆ.

ಬುಧವಾರ ಮೃತಪಟ್ಟ ಇಬ್ಬರೂ ಮಹಿಳೆಯರಾಗಿದ್ದು, ಈ ಮೂಲಕ ಮೃತರ ಸಂಖ್ಯೆ 4,372 ಏರಿಕೆಯಾಗಿದೆ.

ಕನ್ನಡಪ್ರಭ

# ಕೂಡಲೇ ವೇತನ ಪಾವತಿಗೆ ಆಗ್ರಹಿಸಿ ಪೌರಕಾರ್ಮಿಕರ ಧರಣಿ

## 4 ತಿಂಗಳ ವೇತನ ಬಾಕಿ ಆರೋಪ



ಕಳೆದ ನಾಲ್ಕು ತಿಂಗಳಿಂದ ವೇತನ ಪಾವತಿ ಮಾಡಿಲ್ಲ ಎಂದು ಆರೋಪಿಸಿ ಯಲಹಂಕ ವಲಯದ ಬಿಬಿಎಂಪಿಯ ಗುತ್ತಿಗೆ ಪೌರ ಕಾರ್ಮಿಕರು ಪಾಲಿಕೆಯ ಕೇಂದ್ರ ಕಚೇರಿ ಮುಂದೆ ಬುಧವಾರ ಪ್ರತಿಭಟನೆ ನಡೆಸಿದರು.

**ಇನ್ನಾದರೂ ಸಂಬಳ ಕೊಡಿ...**

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಕಳೆದ ನಾಲ್ಕು ತಿಂಗಳಿಂದ ವೇತನ ಪಾವತಿ ಮಾಡಿಲ್ಲ ಎಂದು ಆರೋಪಿಸಿ ಯಲಹಂಕ ವಲಯದ ಬಿಬಿಎಂಪಿಯ ಗುತ್ತಿಗೆ ಪೌರಕಾರ್ಮಿಕರು ಪಾಲಿಕೆಯ ಕೇಂದ್ರ ಕಚೇರಿ ಮುಂದೆ ಬುಧವಾರ ಪ್ರತಿಭಟನೆ ನಡೆಸಿದರು. ಕೇಂದ್ರ ಕಚೇರಿ ಆವರಣದಲ್ಲಿರುವ ಕಾರ್ಮಿಕರ ಪಿತಾಮಹ ಸಾಲಪ್ಪ ಪ್ರತಿಮೆ ಮುಂಭಾಗದಲ್ಲಿ ಪ್ರತಿಭಟನೆ ನಡೆಸಿದ 50ಕ್ಕೂ ಅಧಿಕ ಪೌರಕಾರ್ಮಿಕರು, ಕೂಡಲೇ ವೇತನ ಬಿಡುಗಡೆ ಮಾಡುವಂತೆ ಆಗ್ರಹಿಸಿದರು. ವೇತನ ನೀಡದ ಪರಿಣಾಮ ಮನೆ ಬಾಡಿಗೆ ಪಾವತಿಸಿಲ್ಲ. ಮಕ್ಕಳ ಶಾಲಾ ಶುಲ್ಕ ಪಾವತಿಗೆ ಹಣವಿಲ್ಲ. ಕೆಲಸ ಮಾಡುವ ಸ್ಥಳಕ್ಕೆ ಹೋಗಲೂ ಬಸ್ ಟಿಕೆಟ್ ಕೊಳ್ಳಲು ಹಣವಿಲ್ಲದ ಸ್ಥಿತಿ ನಿರ್ಮಾಣವಾಗಿದೆ. ಈ ಬಗ್ಗೆ ಪಾಲಿಕೆ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಮಾಡಿದರೂ, ಸಮಸ್ಯೆ ಪರಿಹಾರವಾಗುತ್ತಿಲ್ಲ ಎಂದು

VK
ವಿಜಯ ಕರ್ನಾಟಕ

# ಅನಧಿಕೃತ ಧಾರ್ಮಿಕ ಕಟ್ಟಡಗಳ ಸಮೀಕ್ಷೆಗೆ 3 ದಿನಗಳ ಗಡುವು

■ **ವಿಕ ಸುದ್ದಿಲೋಕ** ಬೆಂಗಳೂರು

ಬಿಬಿಎಂಪಿ ವ್ಯಾಪ್ತಿಯಲ್ಲಿ ರಸ್ತೆ, ಪಾದಚಾರಿ ಮಾರ್ಗ, ಉದ್ಯಾನ, ಆಟದ ಮೈದಾನ, ಸರಕಾರಿ ಜಾಗಗಳು ಹಾಗೂ ಸಾರ್ವಜನಿಕ ಸ್ಥಳಗಳನ್ನು ಅತಿಕ್ರಮಿಸಿ ಅನಧಿಕೃತವಾಗಿ ನಿರ್ಮಿಸಿರುವ ಮಂದಿರ, ಮಸೀದಿ, ಚರ್ಚ್, ಗುರುದ್ವಾರ ಸೇರಿದಂತೆ ಎಲ್ಲ ಧಾರ್ಮಿಕ ಕಟ್ಟಡಗಳ ಕುರಿತು ಮೂರು ದಿನಗಳೊಳಗೆ ಸಮೀಕ್ಷೆ ನಡೆಸಿ, ಸಮಗ್ರ ವರದಿ ನೀಡಬೇಕು ಎಂದು ಆಯುಕ್ತ ಎನ್. ಮಂಜುನಾಥ ಪ್ರಸಾದ್ ಅಧಿಕಾರಿಗಳಿಗೆ ಸೂಚನೆ ನೀಡಿದರು.



**ಅಧಿಕಾರಿಗಳಿಗೆ ಬಿಬಿಎಂಪಿ ಆಯುಕ್ತರ ಸೂಚನೆ**

ಸಾರ್ವಜನಿಕ ಸ್ಥಳಗಳಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ಧಾರ್ಮಿಕ ಕಟ್ಟಡಗಳ ತೆರವಿಗೆ ಸಂಬಂಧಿಸಿದಂತೆ ಪಾಲಿಕೆಗೆ ಹೈಕೋರ್ಟ್ ಛೀಮಾರಿ ಹಾಕಿದ ಬೆನ್ನಲ್ಲೇ ಬುಧವಾರ ಸಭೆ ನಡೆಸಿದ ಅವರು, ''ಸಾರ್ವಜನಿಕ ಸ್ಥಳಗಳನ್ನು ಅತಿಕ್ರಮಿಸಿ ಧಾರ್ಮಿಕ ಕಟ್ಟಡಗಳನ್ನು ನಿರ್ಮಿಸಿರುವ ಬಗ್ಗೆ 2009ರಲ್ಲಿ ಸುಪ್ರೀಂಕೋರ್ಟ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಕೆಯಾಗಿದೆ. ಇದು ಕೇವಲ ಬಿಬಿಎಂಪಿಗೆ ಮಾತ್ರವಲ್ಲ, ಇಡೀ ದೇಶಕ್ಕೆ ಅನ್ವಯಿಸುತ್ತದೆ,'' ಎಂದು ಹೇಳಿದರು.

''2009ರ ಸೆ. 29ಕ್ಕೆ ಮೊದಲು ಅನಧಿಕೃತವಾಗಿ ನಿರ್ಮಿಸಿರುವ ಧಾರ್ಮಿಕ ಕಟ್ಟಡಗಳ ಸಮೀಕ್ಷೆ ನಡೆಸಿ ವರದಿ ನೀಡಲು ನ್ಯಾಯಾಲಯ ಸೂಚಿಸಿದೆ. ಈ ಧಾರ್ಮಿಕ ಕಟ್ಟಡಗಳನ್ನು ಸ್ಥಳಾಂತರ ಅಥವಾ ತೆರವುಗೊಳಿಸಬೇಕಿದೆ. 2009ರ ಸೆ. 29ರ ನಂತರ ಅಕ್ರಮವಾಗಿ ಧಾರ್ಮಿಕ ಕಟ್ಟಡಗಳನ್ನು ನಿರ್ಮಿಸಲು ಅವಕಾಶವಿಲ್ಲ. ಅಂಥ ಕಟ್ಟಡಗಳನ್ನು ತೆರವು ಮಾಡಲು ಕೋರ್ಟ್ ಆದೇಶಿಸಿದೆ,'' ಎಂದು ತಿಳಿಸಿದರು.

''ಖಾಸಗಿ ಜಾಗಗಳಲ್ಲಿ ನಿರ್ಮಿಸಿರುವ ಧಾರ್ಮಿಕ ಕಟ್ಟಡಗಳನ್ನು ಹೊರತುಪಡಿಸಿ, ಸರಕಾರಿ ಭೂಮಿ ಒತ್ತುವರಿ ಮಾಡಿಕೊಂಡು ಸಾರ್ವಜನಿಕ ಸ್ಥಳಗಳಲ್ಲಿ ಅನಧಿಕೃತವಾಗಿ ಕಟ್ಟಿರುವ ಮಂದಿರ, ಮಸೀದಿ, ಚರ್ಚ್, ಗುರುದ್ವಾರಗಳ ಪಟ್ಟಿಯನ್ನು ಸಿದ್ಧಪಡಿಸಬೇಕು. 2009ರ ಸೆ. 29ಕ್ಕೆ ಮೊದಲು ಹಾಗೂ ನಂತರ ನಿರ್ಮಿಸಲಾದ ಧಾರ್ಮಿಕ ಕಟ್ಟಡಗಳ ಬಗ್ಗೆ ಎಲ್ಲ ವಾರ್ಡ್ ಎಂಜಿನಿಯರ್‌ಗಳು ಹಾಗೂ ಕಂದಾಯ ಅಧಿಕಾರಿಗಳು ಸಮೀಕ್ಷೆ ನಡೆಸಿ, ಮೂರು ದಿನಗಳೊಳಗೆ ವರದಿ ನೀಡಬೇಕು,'' ಎಂದು ತಾಕೀತು ಮಾಡಿದರು.

''ಇದೊಂದು ಗಂಭೀರ ವಿಷಯವಾಗಿದ್ದು, ಪಾಲಿಕೆಯ ಎಲ್ಲ 8 ವಲಯಗಳಲ್ಲಿರುವ ಅನಧಿಕೃತ ಧಾರ್ಮಿಕ ಕಟ್ಟಡಗಳ ಪಟ್ಟಿ ಸಿದ್ಧಪಡಿಸಬೇಕು. ಜತೆಗೆ 2009ರ ಸೆ. 29ರ ಬಳಿಕ ಅಕ್ರಮವಾಗಿ ನಿರ್ಮಿಸಲಾಗಿರುವ ಧಾರ್ಮಿಕ ಕಟ್ಟಡಗಳಿಗೆ ಜ. 27ರೊಳಗೆ ನೋಟಿಸ್ ಜಾರಿ ಮಾಡಬೇಕು. ಸಂಬಂಧಪಟ್ಟವರಿಂದ ಒಂದು ವಾರದೊಳಗೆ ಸಮಜಾಯಿಷಿ ಪಡೆಯಬೇಕು,'' ಎಂದು ಸೂಚಿಸಿದರು.

''ಧಾರ್ಮಿಕ ಕಟ್ಟಡಗಳ ಸಮೀಕ್ಷೆಯು ಒಂದೇ ಮಾದರಿಯಲ್ಲಿರಬೇಕು. ವಲಯ, ದೇವಾಲಯ, ಮಸೀದಿ, ಚರ್ಚ್, ಗುರುದ್ವಾರದ ಹೆಸರು, ವಾರ್ಡ್ ಸಂಖ್ಯೆ, ವಿಳಾಸ ಹಾಗೂ ಧಾರ್ಮಿಕ ಕಟ್ಟಡಗಳನ್ನು ನಿರ್ಮಿಸಿರುವ ವರ್ಷ, ವಿಸ್ತೀರ್ಣದ ಬಗ್ಗೆ ಮಾಹಿತಿ ಸಂಗ್ರಹಿಸಬೇಕು. ಕಟ್ಟಡಗಳ ಫೋಟೊಗಳನ್ನು ವರದಿಯಲ್ಲಿ ಲಗತ್ತಿಸಬೇಕು. ಹೈಕೋರ್ಟ್‌ಗೆ ವರದಿ ಸಲ್ಲಿಸಿದ ಬಳಿಕ ಪೊಲೀಸ್ ಭದ್ರತೆ ಪಡೆದು ಅನಧಿಕೃತ ಧಾರ್ಮಿಕ ಕಟ್ಟಡಗಳನ್ನು ತೆರವುಗೊಳಿಸಲು ಕ್ರಮ ವಹಿಸಬೇಕು,'' ಎಂದರು.

VK ವಿಜಯ ಕರ್ನಾಟಕ

# 3803 ಮಂದಿಗೆ ಲಸಿಕೆ ವಿತರಣೆ

**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಯಲ್ಲಿ ಬುಧವಾರ 6836 ಮಂದಿ ಆರೋಗ್ಯ ಕಾರ್ಯಕರ್ತರಿಗೆ ಕೋವಿಡ್ ಲಸಿಕೆ ನೀಡಲು ವ್ಯವಸ್ಥೆ ಮಾಡಿಕೊಳ್ಳಲಾಗಿತ್ತು. ಆದರೆ, 3803 ಮಂದಿಯಷ್ಟೇ (ಶೇ 56) ಹಾಜರಾಗಿ ಲಸಿಕೆ ಪಡೆದುಕೊಂಡರು.



ನಗರದಲ್ಲಿ ಒಟ್ಟು 79 ಕೇಂದ್ರಗಳಲ್ಲಿ ಸರಕಾರಿ ಆಸ್ಪತ್ರೆಗಳ 1534 ಮತ್ತು ಖಾಸಗಿ ಆಸ್ಪತ್ರೆಗಳ 5302 ಫಲಾನುಭವಿಗಳಿಗೆ ಲಸಿಕೆ ಹಾಕಲು ಉದ್ದೇಶಿಸಲಾಗಿತ್ತು. ಆದರೆ, ನಿರೀಕ್ಷಿತ ಸಂಖ್ಯೆಯಲ್ಲಿ ಆರೋಗ್ಯ ಕಾರ್ಯಕರ್ತರು ಕೇಂದ್ರಗಳಿಗೆ ಬರಲಿಲ್ಲ. ಹಾಗಾಗಿ, ಸರಕಾರಿ ಆಸ್ಪತ್ರೆಗಳ 1095 ಮತ್ತು ಖಾಸಗಿಯ 2708 ಮಂದಿಗೆ ಮಾತ್ರ ಲಸಿಕೆ ನೀಡಲು ಸಾಧ್ಯವಾಯಿತು. ಆರೋಗ್ಯ ಕಾರ್ಯಕರ್ತರು ಲಸಿಕೆ ಪಡೆಯಲು ಸ್ವಯಂಪ್ರೇರಿತವಾಗಿ ಮುಂದೆ ಬರುತ್ತಿಲ್ಲ. ಆದ ಕಾರಣ, ಲಸಿಕೆ ಪಡೆಯುವ ಫಲಾನುಭವಿಗಳ ಪ್ರಮಾಣವು ದಿನದಿಂದ ದಿನಕ್ಕೆ ಕಡಿಮೆಯಾಗುತ್ತಲೇ ಇದೆ. ಬೇರೆ ಬೇರೆ ಕಾರಣ ನೀಡಿ ಆರೋಗ್ಯ ಕಾರ್ಯಕರ್ತರು ಲಸಿಕೆ ಪಡೆಯುವುದಕ್ಕೆ ಗೈರಾಗುತ್ತಿದ್ದಾರೆ.

VK
ವಿಜಯ ಕರ್ನಾಟಕ

# 260 ಮಂದಿಗೆ ಕೊರೊನಾ ಸೋಂಕು

**ಬೆಂಗಳೂರು:** ನಗರದಲ್ಲಿ ಬುಧವಾರ ಹೊಸದಾಗಿ 260 ಮಂದಿಗೆ ಕೊರೊನಾ ಸೋಂಕು ತಗಲಿರುವುದು ದೃಢಪಟ್ಟಿದೆ. ಕೋವಿಡ್‌ಗೆ ಇಬ್ಬರು ಬಲಿಯಾಗಿದ್ದಾರೆ.ಬೆಂಗಳೂರು ನಗರ ಜಿಲ್ಲೆಯಲ್ಲಿ ಇದುವರೆಗೆ 3,95,769 ಸೋಂಕಿತ ಪ್ರಕರಣಗಳು ವರದಿಯಾಗಿವೆ. ಈ ಪೈಕಿ 3,86,260 ಮಂದಿ ಚೇತರಿಸಿಕೊಂಡಿದ್ದಾರೆ. ಉಳಿದ 5136 ರೋಗಿಗಳು ನಿಗದಿತ ಆಸ್ಪತ್ರೆ, ಕೋವಿಡ್ ಆರೈಕೆ ಕೇಂದ್ರಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಕೊರೊನಾ ಪೀಡಿತರಲ್ಲಿ ಈವರೆಗೆ 4372 ಮಂದಿ ಮೃತಪಟ್ಟಿದ್ದಾರೆ.

VK
ವಿಜಯ ಕರ್ನಾಟಕ

# 'ಭಿಕ್ಷಾಟನೆ ಮಾಡುವ ಮಕ್ಕಳ ಭವಿಷ್ಯ ರೂಪಿಸಿ'

■ **ವಿಕ ಸುದ್ದಿಲೋಕ ಬೆಂಗಳೂರು**

ಭಿಕ್ಷಾಟನೆಯಲ್ಲಿ ತೊಡಗಿರುವ ಹಾಗೂ ಬಸ್ ನಿಲ್ದಾಣ, ಟ್ರಾಫಿಕ್ ಸಿಗ್ನಲ್‌ಗಳಲ್ಲಿ ಆಟಿಕೆ ವಸ್ತುಗಳನ್ನು ಮಾರಾಟ ಮಾಡುವ ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ ಕಲ್ಪಿಸಿ, ಭವಿಷ್ಯ ರೂಪಿಸಲು ಕ್ರಮ ಕೈಗೊಳ್ಳಬೇಕಿದೆ ಎಂದು ಹೈಕೋರ್ಟ್‌ನ ನ್ಯಾಯಮೂರ್ತಿ ಶ್ರೀಶಾನಂದ ಹೇಳಿದರು.

ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರವು ಬಿಬಿಎಂಪಿ, ಪೊಲೀಸ್, ಸಮಾಜ ಕಲ್ಯಾಣ, ಮಹಿಳಾ ಮತ್ತು ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ನಗರದ ಪುರಭವನದಲ್ಲಿ ಹಮ್ಮಿಕೊಂಡಿದ್ದ 'ಮಕ್ಕಳ ಭಿಕ್ಷಾಟನೆ ನಿರ್ಮೂಲನೆ ಹಾಗೂ ಮಕ್ಕಳ ಕಳ್ಳಸಾಗಣೆ ನಿಯಂತ್ರಣ' ಕುರಿತ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

''ನಗರದಲ್ಲಿ ಭಿಕ್ಷಾಟನೆ ಮಾಡುತ್ತಿರುವ ಮತ್ತು ಟ್ರಾಫಿಕ್ ಸಿಗ್ನಲ್‌ಗಳಲ್ಲಿ ಪೆನ್ನು, ಬಲೂನ್, ಇತರೆ ಆಟಿಕೆಗಳನ್ನು ಮಾರಾಟ ಮಾಡುತ್ತಿರುವ ಮಕ್ಕಳ ಸಮೀಕ್ಷೆಗೆ ವಲಯವಾರು ತಂಡ ರಚಿಸಬೇಕು. ಆದಷ್ಟು ಶೀಘ್ರ ಸಮೀಕ್ಷೆ ಕೈಗೊಂಡು ಪೂರ್ಣಗೊಳಿಸಬೇಕು. ಶಾಲೆ ತೊರೆದು ಭಿಕ್ಷಾಟನೆ ಅಥವಾ ಆಟಿಕೆಗಳನ್ನು ಮಾರಾಟ ಮಾಡುತ್ತಿರುವುದು ಏಕೆ ಎಂಬ ಮಾಹಿತಿಯನ್ನು ಕಲೆ ಹಾಕಬೇಕು,'' ಎಂದರು.

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯದರ್ಶಿ ಎಚ್.ಶಶಿಧರ ಶೆಟ್ಟಿ, ಎನ್.ನಾಗಾಂಬಿಕಾ ದೇವಿ, ಜೆ.ಮಂಜುನಾಥ್, ರವೀಂದ್ರ , ಹೆಚ್ಚುವರಿ ಪೊಲೀಸ್ ಆಯುಕ್ತ ಎಸ್.ಮುರುಗನ್ ಮತ್ತಿತರರು ಉಪಸ್ಥಿತರಿದ್ದರು.

ವಿಜಯವಾಣಿ
ಕನ್ನಡಿಗರ ಧ್ವನಿ

# ಅನಧಿಕೃತ ಧಾರ್ಮಿಕ ಕಟ್ಟಡ ಪತ್ತೆ ಮಾಡಿ

**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಯಲ್ಲಿ ಸಾರ್ವಜನಿಕ ಪ್ರದೇಶಗಳಲ್ಲಿ ಅನಧಿಕೃತವಾಗಿ ನಿರ್ಮಿಸಲಾದ ಧಾರ್ಮಿಕ ಕಟ್ಟಡಗಳ ಬಗ್ಗೆ ಮೂರು ದಿನದೊಳಗೆ ಸಮೀಕ್ಷಾ ವರದಿ ಸಲ್ಲಿಸುವಂತೆ ವಾರ್ಡ್‌ವಾರು ಅಧಿಕಾರಿಗಳಿಗೆ ಆಯುಕ್ತ ಮಂಜುನಾಥಪ್ರಸಾದ್ ಸೂಚಿಸಿದ್ದಾರೆ.

» **3 ದಿನಗಳಲ್ಲಿ ವರದಿ ಸಲ್ಲಿಕೆಗೆ ಅಧಿಕಾರಿಗಳಿಗೆ ಆಯುಕ್ತರ ಸೂಚನೆ**

ನಗರದಲ್ಲಿ ಅನಧಿಕೃತವಾಗಿ ನಿರ್ಮಿಸಲಾದ ಧಾರ್ಮಿಕ ಕಟ್ಟಡಗಳನ್ನು ಗುರುತಿಸುವ ಕುರಿತು ಬುಧವಾರ ನಡೆದ ಸಭೆಯಲ್ಲಿ ಈ ನಿರ್ದೇಶನ ನೀಡಿದರು. ರಸ್ತೆಗಳು, ಪಾದಚಾರಿ ಮಾರ್ಗ, ಉದ್ಯಾನ, ಆಟದ ಮೈದಾನ ಹಾಗೂ ಸರ್ಕಾರಿ ಸ್ವಾಮ್ಯದ ನಿವೇಶನದಲ್ಲಿ ಧಾರ್ಮಿಕ ಕಟ್ಟಡ ನಿರ್ಮಿಸಲಾಗಿದೆ. ಸಾರ್ವಜನಿಕ ಸ್ಥಳಗಳಲ್ಲಿ ಅನಧಿಕೃತ ಧಾರ್ಮಿಕ ಕಟ್ಟಡಗಳನ್ನು ನಿರ್ಮಿಸುವಂತಿಲ್ಲ ಎಂದು ಸುಪ್ರೀಂಕೋರ್ಟ್ 2009ರಲ್ಲಿಯೇ ಆದೇಶ ಮಾಡಿದೆ. ಅನಧಿಕೃತವಾಗಿ ಧಾರ್ಮಿಕ ಕಟ್ಟಡ ನಿರ್ಮಾಣ ಕುರಿತು ಜ.28ರಂದು ಹೈಕೋರ್ಟ್‌ನಲ್ಲಿ ವಿಚಾರಣೆಯಿದ್ದು, ನ್ಯಾಯಾಲಯಕ್ಕೆ ನಿಖರ ಮಾಹಿತಿ ನೀಡಬೇಕಿದೆ. ಈ ಹಿನ್ನೆಲೆಯಲ್ಲಿ ಮೂರು ದಿನದಲ್ಲಿ ಸಮೀಕ್ಷೆ ನಡೆಸಿ ವರದಿ ನೀಡುವಂತೆ ತಿಳಿಸಿದರು.

**ಕಟ್ಟಡಗಳಿಗೆ ನೋಟಿಸ್:** ನಗರದಲ್ಲಿ 2009ಕ್ಕಿಂತ ಮೊದಲು ಹಾಗೂ 2009ರ ನಂತರ ನಿರ್ಮಿಸಲಾದ ಧಾರ್ಮಿಕ ಕಟ್ಟಡಗಳ ಬಗ್ಗೆ ಆಯಾ ವಾರ್ಡ್‌ಗಳ ಇಂಜಿನಿಯರ್ ಹಾಗೂ ಕಂದಾಯ ಅಧಿಕಾರಿಗಳು ಜಂಟಿಯಾಗಿ ಸಮೀಕ್ಷೆ ನಡೆಸಿ ವರದಿ ನೀಡಬೇಕು. 2009ರ ನಂತರ ಧಾರ್ಮಿಕ ಕಟ್ಟಡ ನಿರ್ಮಿಸಿದವರಿಗೆ ಜ.27ರೊಳಗೆ ನೋಟಿಸ್ ಜಾರಿಗೊಳಿಸಿ, 7 ದಿನದಲ್ಲಿ ಸಮಜಾಯಿಷಿ ಪಡೆಯಬೇಕು. ಎಲ್ಲ ವರದಿಯನ್ನು ಹೈಕೋರ್ಟ್‌ಗೆ ಸಲ್ಲಿಸಿದ ನಂತರ ಪೊಲೀಸ್ ಇಲಾಖೆ ಭದ್ರತೆಯೊಂದಿಗೆ ಅನಧಿಕೃತ ಧಾರ್ಮಿಕ ಕಟ್ಟಡಗಳ ತೆರವುಗೊಳಿಸಲು ಕ್ರಮ ವಹಿಸುವಂತೆ ಸೂಚಿಸಿದರು.

ವಿಶೇಷ ಆಯುಕ್ತರಾದ ಜೆ. ಮಂಜುನಾಥ್, ಬಸವರಾಜ್, ರಾಜೇಂದ್ರ ಚೋಳನ್, ತುಳಸಿ ಮದ್ದಿನೇನಿ, ರವೀಂದ್ರ, ಎಲ್ಲ ವಲಯಗಳ ಜಂಟಿ ಆಯುಕ್ತರು ಮತ್ತು ಹಿರಿಯ ಅಧಿಕಾರಿಗಳು ಸಭೆಯಲ್ಲಿದ್ದರು.

ವಿಜಯವಾಣಿ
ಕನ್ನಡಿಗರ ಧ್ವನಿ

## ನಿಗದಿತ ಗುರಿಯಲ್ಲಿ ಶೇ.56 ಮಂದಿ ಸ್ವೀಕಾರ | ಬಿಬಿಎಂಪಿ ಅಧಿಕಾರಿಗಳ ಮಾಹಿತಿ

# ಕೋವಿಡ್ ಲಸಿಕೆ ಪಡೆಯಲು ಉತ್ತಮ ಸ್ಪಂದನೆ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಬಿಬಿಎಂಪಿ ವ್ಯಾಪ್ತಿಯಲ್ಲಿ ಬುಧವಾರ 6,836 ಆರೋಗ್ಯ ಕಾರ್ಯಕರ್ತರಿಗೆ ಲಸಿಕೆ ಹಾಕುವ ಗುರಿ ಹಾಕಿಕೊಂಡಿದ್ದು, 3,803 (ಶೇ.56) ಮಂದಿ ಪಡೆಯುವ ಮೂಲಕ ಉತ್ತಮ ಸ್ಪಂದನೆ ವ್ಯಕ್ತಪಡಿಸಿದ್ದಾರೆ.

ನಗರದಲ್ಲಿ 21 ಸರ್ಕಾರಿ ಆಸ್ಪತ್ರೆ ಮತ್ತು 58 ಖಾಸಗಿ ಆಸ್ಪತ್ರೆಗಳು ಸೇರಿ ಒಟ್ಟು 79 ಕೇಂದ್ರಗಳಲ್ಲಿ ಕೋವಿಡ್ ಲಸಿಕೆ ನೀಡಲಾಯಿತು. ಸರ್ಕಾರಿ ಆಸ್ಪತ್ರೆಯ 1,095 ಹಾಗೂ ಖಾಸಗೊ ಆಸ್ಪತ್ರೆಯ 2,708 ಆರೋಗ್ಯ ಸಿಬ್ಬಂದಿ ಸೇರಿ ಒಟ್ಟು 3,806 ಮಂದಿ ಲಸಿಕೆ ಪಡೆದಿದ್ದಾರೆ ಎಂದು ಬಿಬಿಎಂಪಿ ಮಾಹಿತಿ ನೀಡಿದೆ.



**ಎಚ್ಚೆತ್ತ ಸಿಬ್ಬಂದಿ:** ಕೋವಿಡ್ ಲಸಿಕೆ ವಿತರಣೆ ದಿನದಿಂದಲೂ ನೋಂದಣಿ ಮಾಡಿಸಿದ ಆರೋಗ್ಯ ಕಾರ್ಯಕರ್ತರು ಲಸಿಕೆ ಪಡೆಯುವಲ್ಲಿ ಹಿಂದೇಟು ಹಾಕುತ್ತಿದ್ದರು. ಇದರಿಂದ ಒಂದು ದಿನಕ್ಕೆ ಲಸಿಕೆ ನೀಡಲು ಪಾಲಿಕೆ ನಿಗದಿಪಡಿಸಿದ ಗುರಿಯಲ್ಲಿ ಶೇ.40ಕ್ಕಿಂತ ಕಡಿಮೆ ಆರೋಗ್ಯ ಕಾರ್ಯಕರ್ತರು ಲಸಿಕೆ ಪಡೆಯುತ್ತಿದ್ದರು. ಪದೇಪದೆ ಆರೋಗ್ಯ ಸಿಬ್ಬಂದಿಗೆ ಲಸಿಕೆ ಹಾಕಿಸಿ ಕೊಳ್ಳಲು ಅವಕಾಶ ನೀಡುವುದಿಲ್ಲ ಎಂಬ ಪಾಲಿಕೆ ಆಯುಕ್ತರು ಸೂಚನೆ ನೀಡುತ್ತಿದ್ದಂತೆ ಬುಧವಾರ ಹೆಚ್ಚು ಮಂದಿ (ಶೇ.56) ಲಸಿಕೆ ಪಡೆದುಕೊಂಡಿದ್ದಾರೆ.

### ವಲಯವಾರು ಲಸಿಕಾ ಕೇಂದ್ರಗಳಲ್ಲಿ ಲಸಿಕೆ ಪಡೆದವರು

| ವಲಯಗಳು | ಕೇಂದ್ರ | ಲಸಿಕೆ ಪಡೆದವರು |
|---|---|---|
| ಪೂರ್ವ | 8 | 100 |
| ಪಶ್ಚಿಮ | 37 | 1,886 |
| ದಕ್ಷಿಣ | 12 | 662 |
| ಆರ್.ಆರ್. ನಗರ | 9 | 271 |
| ಬೊಮ್ಮನಹಳ್ಳಿ | 1 | 302 |
| ದಾಸರಹಳ್ಳಿ | 3 | 138 |
| ಯಲಹಂಕ | 6 | 302 |
| ಮಹದೇವಪುರ | 3 | 142 |
| ಒಟ್ಟು | 79 | 3,803 |

## 260 ಹೊಸ ಕೋವಿಡ್ ಪ್ರಕರಣಗಳು ಪತ್ತೆ

**ಬೆಂಗಳೂರು:** ರಾಜಧಾನಿಯಲ್ಲಿ ಬುಧವಾರ 260 ಹೊಸ ಕೋವಿಡ್ ಪ್ರಕರಣ ಪತ್ತೆಯಾಗಿದ್ದು, 303 ಮಂದಿ ಗುಣಮುಖರಾಗಿದ್ದಾರೆ. ಈ ಮೂಲಕ ಒಟ್ಟು ಸೋಂಕಿತರ ಸಂಖ್ಯೆ 3,95,769 ಏರಿಕೆಯಾಗಿದೆ. ಈವರೆಗೆ 3,86,260 ಮಂದಿ ಗುಣಮುಖರಾಗಿ ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದಾರೆ. 5,136 ಸಕ್ರಿಯ ಪ್ರಕರಣಗಳಿದ್ದು, ಗಂಭೀರ ಸ್ಥಿತಿಯಲ್ಲಿರುವ 74 ಮಂದಿ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಇನ್ನು ಸೋಂಕಿಗೆ ಬುಧವಾರ ಇಬ್ಬರು ಬಲಿಯಾಗಿದ್ದು, ಒಟ್ಟು ಮೃತರ ಸಂಖ್ಯೆ 4,372 ಏರಿಕೆಯಾಗಿದೆ.

ವಿಜಯವಾಣಿ
ಕನ್ನಡಿಗರ ಧ್ವನಿ



(ವಿಜಯವಾಣಿ ಚಿತ್ರ)

ವೇತನ ಪಾವತಿ ವಿಳಂಬ ಖಂಡಿಸಿ ಯಲಹಂಕ ವಲಯದಲ್ಲಿ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುವ ಮೆಕಾನಿಕಲ್ ಸ್ವೀಪಿಂಗ್ ಪೌರ ಕಾರ್ಮಿಕರು ಬುಧವಾರ ಬಿಬಿಎಂಪಿ ಕೇಂದ್ರ ಕಚೇರಿ ಆವರಣದಲ್ಲಿ ಪ್ರತಿಭಟನೆ ನಡೆಸಿದರು.

ವಿಜಯವಾಣಿ
ಕನ್ನಡಿಗರ ಧ್ವನಿ

# ಆಯುಕ್ತ ಮಂಜುನಾಥಪ್ರಸಾದ್‌ಗೆ ಪ್ರಶಸ್ತಿ

**ಬೆಂಗಳೂರು:** ರಾಜ್ಯ ಚುನಾವಣಾ ಆಯೋಗ ನೀಡುವ 2021ನೇ ಸಾಲಿನ ಉತ್ತಮ ಚುನಾವಣಾಧಿಕಾರಿ ಪ್ರಶಸ್ತಿಗೆ ಬಿಬಿಎಂಪಿ ಆಯುಕ್ತ ಹಾಗೂ ಬೆಂಗಳೂರು



ನಗರ ಜಿಲ್ಲಾ ಚುನಾವಣಾಧಿಕಾರಿ ಮಂಜುನಾಥ ಪ್ರಸಾದ್ ಭಾಜನರಾಗಿದ್ದಾರೆ. ರಾಜರಾಜೇಶ್ವರಿ ನಗರ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯನ್ನು ಮಂಜುನಾಥ ಪ್ರಸಾದ್ ಯಶಸ್ವಿಯಾಗಿ ನಡೆಸಿದ್ದರು. ಈ ಹಿನ್ನೆಲೆಯಲ್ಲಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ 25 ರಂದು ಪುಟ್ಟಣ್ಣ ಚೆಟ್ಟಿ ಪುರಭವನದಲ್ಲಿ ಆಯೋಜಿಸುವ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಉಪ ಮುಖ್ಯ ಚುನಾವಣಾಧಿಕಾರಿ ಕೆ.ಎಂ. ಪ್ರಾಣೇಶ್ ತಿಳಿಸಿದ್ದಾರೆ.

ವಿಜಯವಾಣಿ
ಕನ್ನಡಿಗರ ಧ್ವನಿ

# 1.05 ಲಕ್ಷ ವಾರಿಯರ್ಸ್‌ಗಳಿಗೆ ಲಸಿಕೆ

**ಬೆಂಗಳೂರು:** ಕೋವಿಡ್ ಲಸಿಕೆ ವಿತರಣೆ ಅಭಿಯಾನ ಆರಂಭವಾಗಿ ಐದು ದಿನಗಳಲ್ಲಿ 1.05 ಲಕ್ಷ ಕರೊನಾ ವಾರಿಯರ್ಸ್‌ಗಳು ಲಸಿಕೆ ಹಾಕಿಸಿಕೊಂಡಿದ್ದಾರೆ. ಇದರೊಂದಿಗೆ ಲಸಿಕೆ ವಿತರಣೆಯಲ್ಲಿ ಒಂದು ಲಕ್ಷ ಗಡಿ ದಾಟಿದ ದೇಶದ ಮೊದಲ ರಾಜ್ಯ ಎಂಬ ಹೆಗ್ಗಳಿಗೆ ಕರ್ನಾಟಕದ್ದಾಗಿದೆ. ಅಭಿಯಾನದ 5ನೇ ದಿನವಾದ ಬುಧವಾರ 62,772 ಮಂದಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿತ್ತು. 34,583 ಮಂದಿ ಲಸಿಕೆ ಹಾಕಿಸಿಕೊಂಡಿದ್ದು, ಶೇ. 55 ಗುರಿ ತಲುಪಲಾಗಿದೆ. ಬುಧವಾರವೂ ಕೆಲವೆಡೆ ಕೋವಿನ್ ಆ್ಯಪ್ ಸಮಸ್ಯೆ ಮುಂದುವರಿದಿದ್ದು, ಕೆಲ ಕೇಂದ್ರದ ಸಿಬ್ಬಂದಿ ಲಸಿಕೆ ಹಾಕಿಸಿಕೊಳ್ಳಲು ದೂರವಾಣಿ ಕರೆ ಮಾಡಿ ಮಾಹಿತಿ ನೀಡಿದರು.

» **ಅತಿ ಹೆಚ್ಚು ಲಸಿಕೆ ನೀಡಿದ ಮೊದಲ ರಾಜ್ಯ ಕರ್ನಾಟಕ**

**ಸೋಂಕಿಗೆ ನಾಲ್ವರು ಬಲಿ:** ರಾಜ್ಯದಲ್ಲಿ ಬುಧವಾರ 501 ಕರೊನಾ ಸೋಂಕು ಪ್ರಕರಣ ವರದಿಯಾಗಿದ್ದು, 665 ಮಂದಿ ಆಸ್ಪತ್ರೆಯಿಂದ ಬಿಡುಗಡೆ ಹೊಂದಿದ್ದಾರೆ. ಸೋಂಕಿತರ ಸಂಖ್ಯೆ 9.33 ಲಕ್ಷ ತಲುಪಿದ್ದು, ಗುಣಮುಖರ ಸಂಖ್ಯೆ 9.13 ಲಕ್ಷಕ್ಕೆ ಏರಿಕೆಯಾಗಿದೆ. ನಾಲ್ವರು ಬಲಿಯಾಗಿದ್ದು, ಮೃತರ ಸಂಖ್ಯೆ 12,185ಕ್ಕೆ ತಲುಪಿದೆ. 7,697 ಸಕ್ರಿಯ ಪಕರಣಗಳಿದ್ದು, 168 ಮಂದಿ ಐಸಿಯುನಲ್ಲಿದ್ದಾರೆ.

ಉದಯವಾಣಿ
ಜನಮನದ ಜೀವನಾಡಿ

# 3,803 ಜನರಿಗೆ ಕೋವಿಡ್ ಲಸಿಕೆ

**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಯಲ್ಲಿ ಬುಧವಾರ 79 ಕೋವಿಡ್ ಲಸಿಕಾ ಕೇಂದ್ರದಲ್ಲಿ 3,803 ಜನ ಆರೋಗ್ಯ ಕಾರ್ಯಕರ್ತರಿಗೆ ಲಸಿಕೆ ನೀಡಲಾಗಿದೆ. ಕೋವಿಡ್ ಲಸಿಕೆ ನೀಡಲು ಒಟ್ಟು 79 ಕೇಂದ್ರಗಳನ್ನು ಗುರುತಿಸಲಾಗಿತ್ತು. ಬಿಬಿಎಂಪಿ ಹಾಗೂ ಸರ್ಕಾರಿ ಆಸ್ಪತ್ರೆಗಳು ಸೇರಿ 2,158 ಖಾಸಗಿ ಆಸ್ಪತ್ರೆಗಳ ಲಸಿಕಾ ಕೇಂದ್ರಗಳಿದ್ದವು. ಬುಧವಾರ 1,534 ಸರ್ಕಾರಿ, ಬಿಬಿಎಂಪಿ ಆರೋಗ್ಯ ಕಾರ್ಯಕರ್ತರು ಮತ್ತು 5,302 ಖಾಸಗಿ ಆಸ್ಪತ್ರೆಯ ಸಿಬ್ಬಂದಿ ಸೇರಿದಂತೆ ಒಟ್ಟು 6,836 ಆರೋಗ್ಯ ಕಾರ್ಯಕರ್ತರಿಗೆ ಲಸಿಕೆ ನೀಡಲು ಉದ್ದೇಶಿಸಲಾಗಿತ್ತು. ಈ ಪೈಕಿ 3,803 ಆರೋಗ್ಯ ಕಾರ್ಯಕರ್ತರು ಲಸಿಕೆ ಪಡೆದಿದ್ದು, ಶೇ.56 ಗುರಿ ಸಾಧನೆಯಾಗಿದೆ ಎಂದು ಪಾಲಿಕೆ ಆರೋಗ್ಯಾಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಉದಯವಾಣಿ
ಜನಮನದ ಜೀವನಾಡಿ

# ಆಯುಕ್ತರಿಗೆ ಅತ್ಯುತ್ತಮ ಚುನಾವಣಾಧಿಕಾರಿ ಪ್ರಶಸ್ತಿ

**ಬೆಂಗಳೂರು:** ನಗರದಲ್ಲಿ ಕೊರೊನಾ ಸೋಂಕು ಭೀತಿಯ ನಡುವೆಯೂ ಅ.9 ರಿಂದ ನ.10ರವರೆಗೆ ರಾಜರಾಜೇಶ್ವರಿ ನಗರ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯನ್ನು ಬಿಬಿಎಂಪಿ ಆಯುಕ್ತ ಎನ್. ಮಂಜುನಾಥ್ ಪ್ರಸಾದ್ ಅವರು ಯಶಸ್ವಿಯಾಗಿ ನಡೆಸಿರುವ ಹಿನ್ನೆಲೆಯಲ್ಲಿ ರಾಜ್ಯ ಚುನಾವಣಾ ಆಯೋಗ 2021ನೇ ಸಾಲಿನ ಉತ್ತಮ ಚುನಾವಣಾಧಿಕಾರಿ ಪ್ರಶಸ್ತಿ ನೀಡಲು ನಿರ್ಧರಿಸಿದೆ.



ಬಿಬಿಎಂಪಿ ಆಯುಕ್ತ ಹಾಗೂ ಚುನಾವಣಾಧಿಕಾರಿಯೂ ಆಗಿರುವ ಎನ್. ಮಂಜುನಾಥ ಪ್ರಸಾದ್ ಅವರು ರಾಜ್ಯಮಟ್ಟದ ವಾರ್ಷಿಕ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ರಾಷ್ಟ್ರೀಯಮತದಾರರ ದಿನಾಚರಣೆ ಜ.25ಕ್ಕೆ ಟೌನ್ ಹಾಲ್‌ನಲ್ಲಿ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ನಡೆಯಲಿದೆ ಎಂದು ಸರ್ಕಾರದ ಅಧೀನ ಕಾರ್ಯದರ್ಶಿ ಹಾಗೂ ಉಪ ಮುಖ್ಯ ಚುನಾವಣಾಧಿಕಾರಿ ಕೆ.ಎಂ. ಪ್ರಾಣೇಶ್ ತಿಳಿಸಿದ್ದಾರೆ.

ಸಂಯುಕ್ತ ಕರ್ನಾಟಕ

# ಪೌರಕಾರ್ಮಿಕರ ಪ್ರತಿಭಟನೆ

**ಸಂ.ಕ.ಸಮಾಚಾರ ಬೆಂಗಳೂರು**
ಯಲಹಂಕ ವಲಯದಲ್ಲಿ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುವ 170 ಮೆಕ್ಯಾನಿಕಲ್ ಸ್ವೀಪಿಂಗ್ ಪೌರಕಾರ್ಮಿಕರು ಕಳೆದ 4 ತಿಂಗಳಿಂದ ಪಾಲಿಕೆ ವೇತನ ಪಾವತಿಸಿಲ್ಲ ಎಂದು ಆರೋಪಿಸಿ ಬಿಬಿಎಂಪಿ ಕೇಂದ್ರ ಕಚೇರಿಯಲ್ಲಿ ಪ್ರತಿಭಟನೆ ನಡೆಸಿದರು.

ಪಾಲಿಕೆಯ ಕೇಂದ್ರ ಕಚೇರಿಯಲ್ಲಿನ ಪೌರಕಾರ್ಮಿಕರ ಪಿತಾಮಹ ಸಾಲಪ್ಪ ಪ್ರತಿಮೆ ಮುಂಭಾಗದಲ್ಲಿ 50ಕ್ಕೂ ಹೆಚ್ಚು ಪೌರಕಾರ್ಮಿಕರು ಕೆಲಸವನ್ನು ಸ್ಥಗಿತಗೊಳಿಸಿ ವೇತನ ನೀಡದ ಪಾಲಿಕೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಬಹುತೇಕ ಪೌರಕಾರ್ಮಿಕರು ಬಾಡಿಗೆ ಮನೆಗಳಲ್ಲಿ ವಾಸ ಮಾಡುತ್ತಿದ್ದು, ವೇತನವಿಲ್ಲದೆ ಬಾಡಿಗೆ ಪಾವತಿ ಮತ್ತು ದಿನನಿತ್ಯ ಜೀವನಕ್ಕೂ ತೊಂದರೆಯಾಗಿದೆ. ಮಕ್ಕಳ ಶಾಲಾ ಶುಲ್ಕ ಪಾವತಿಗೆ ಹಣವಿಲ್ಲದಂತಾಗಿದೆ. ಕೆಲಸ ಮಾಡುವ ಸ್ಥಳಕ್ಕೆ ಹೋಗಲೂ ಬಸ್ ಚಾರ್ಜ್‌ಗೆ ಬೇರೊಬ್ಬರ ಬಳಿ ಸಾಲಕ್ಕೆ ಕೈಯೊಡ್ಡುವಂತಾಗಿದೆ. ಈ ಬಗ್ಗೆ ಪಾಲಿಕೆ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಮಾಡಿದರೂ, ಸಮಸ್ಯೆ ಪರಿಹಾರವಾಗುತ್ತಿಲ್ಲ. ತೀವ್ರ ಸಂಕಷ್ಟಕ್ಕೆ ಒಳಗಾಗಿರುವ ನಮಗೆ ಕೂಡಲೆ 4 ತಿಂಗಳ ವೇತನ ಬಾಕಿ ಪಾವತಿಸಬೇಕೆಂದು ಆಗ್ರಹಿಸಿದರು. ಪೌರಕಾರ್ಮಿಕರಾದ ಮಲ್ಲಮ್ಮ, ರಾಮಂಜಮ್ಮ, ವಿರೇಶ, ತೇಜು, ಮಲ್ಲಯ್ಯ, ದೊಡ್ಡಮ್ಮ, ತಾಯಣ್ಣ ಮತ್ತಿತರರು ತಮಗೆ ವೇತನ ನೀಡದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು.

## ವೇತನ ಬಿಡುಗಡೆಗೆ ಕ್ರಮ

“ಮೆಕ್ಯಾನಿಕಲ್ ಯಂತ್ರವನ್ನು ಗುತ್ತಿಗೆದಾರರೇ ನಿರ್ವಹಣೆ ಮಾಡುತ್ತಿದ್ದಾರೆ. ಆದರೆ, ಯಲಹಂಕದಲ್ಲಿ ಏಜೆನ್ಸಿ ನೇಮಕ ಮಾಡಿಕೊಳ್ಳಲಾಗಿದೆ. ಈಗ ಈ ಪದ್ಧತಿ ತಡೆಯಲಾಗಿದ್ದು ಈ ವಿಷಯವನ್ನು ತನಿಖೆಗೆ ಆದೇಶ ನೀಡಲಾಗಿದೆ. ಅಲ್ಲಿನ ಪೌರಕಾರ್ಮಿಕರಿಗೆ ವೇತನ ಬಿಡುಗಡೆಗೆ ಆಯುಕ್ತರು ಅನುಮತಿ ನೀಡಿದ್ದು ಕೆಲವು ತಿಂಗಳ ವೇತನ ನೀಡಲಾಗುವುದು. ಉಳಿದದ್ದು ತನಿಖೆ ನಂತರ ಬಿಡುಗಡೆ ಮಾಡಲಾಗುತ್ತದೆ.

■ **ಡಿ. ರಂದೀಪ್** | ವಿಶೇಷ ಆಯುಕ್ತ

ಸಂಯುಕ್ತ ಕರ್ನಾಟಕ

# ಆಸ್ತಿ ತೆರಿಗೆ ಹೆಚ್ಚಳಕ್ಕೆ ಸುಗ್ರೀವಾಜ್ಞೆ

**ಬೆಂಗಳೂರು:** ಬಿಬಿಎಂಪಿ ಹೊರತು ಪಡಿಸಿ ಇನ್ನುಳಿದ ನಗರ ಪಾಲಿಕೆಗಳು ಮತ್ತು ಸ್ಥಳೀಯ ಸಂಸ್ಥೆಗಳಲ್ಲಿ ಆಸ್ತಿ ತೆರಿಗೆ ಹೆಚ್ಚಳ ಮಾಡುವ ವಿಧೇಯಕಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಬುಧವಾರ ಸುಗ್ರೀವಾಜ್ಞೆ ಹೊರಡಿಸಿದೆ.

ಈಚೆಗೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಗಿತ್ತು. ಅದರನ್ವಯ 2021–22 ರಿಂದ ಮೂರು ವರ್ಷಕ್ಕೊಮ್ಮೆ ಬದಲಾಗಿ ಪ್ರತಿ ಆರ್ಥಿಕ ವರ್ಷದಲ್ಲಿ ಶೇ.3ರಷ್ಟು ಹೆಚ್ಚಳ ಮಾಡುವ ಸಂಬಂಧ ಕರ್ನಾಟಕ ನಗರಾಡಳಿತ ಕಾಯ್ದೆಗೆ ತಿದ್ದುಪಡಿ ತರಲು ಸರ್ಕಾರ ಉದ್ದೇಶಿಸಿದ್ದು ಇದೀಗ ತಿದ್ದುಪಡಿ ವಿಧೇಯಕಕ್ಕೆ ಸಂಬಂಧಿಸಿದಂತೆ ಸುಗ್ರೀವಾಜ್ಞೆ ಹೊರಡಿಸಿದೆ.

ಸಂಯುಕ್ತ ಕರ್ನಾಟಕ Thu, 21 Januai
epaper.samyuk

ಸಂಯುಕ್ತ ಕರ್ನಾಟಕ

# 3803 ಮಂದಿಗೆ ಲಸಿಕೆ

**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಯಲ್ಲಿ ಬುಧವಾರ 79 ಕೋವಿಡ್ ಲಸಿಕಾ ಕೇಂದ್ರದಲ್ಲಿ 3,803 (ಶೇ.56) ಆರೋಗ್ಯ ಕಾರ್ಯಕರ್ತರು ಲಸಿಕೆ ಪಡೆದುಕೊಂಡಿದ್ದಾರೆ.




ಬೆಂಗಳೂರಿನಲ್ಲಿ ಕೋವಿಡ್ ಲಸಿಕೆ ಅಭಿಯಾನದ ಆರಂಭಗೊಂಡು ಐದನೇ ದಿನವಾದ ಬುಧವಾರ ಒಟ್ಟು 79 ಕೋವಿಡ್ ಲಸಿಕಾ ಕೇಂದ್ರದಲ್ಲಿ ಅಭಿಯಾನ ನಡೆಸಲಾಗಿದೆ. ಈ ಪೈಕಿ 21 ಬಿಬಿಎಂಪಿ ಹಾಗೂ ಸರ್ಕಾರಿ ಆಸ್ಪತ್ರೆಗಳು, ಉಳಿದ 58 ಖಾಸಗಿ ಆಸ್ಪತ್ರೆಗಳ ಲಸಿಕಾ ಕೇಂದ್ರಗಳಾಗಿವೆ. ಬುಧವಾರ 1,534 ಸರ್ಕಾರಿ ಹಾಗೂ ಬಿಬಿಎಂಪಿಯ ಆರೋಗ್ಯ ಕಾರ್ಯಕರ್ತರು ಮತ್ತು 5,302 ಖಾಸಗಿ ಆಸ್ಪತ್ರೆಯ ಸಿಬ್ಬಂದಿ ಸೇರಿದಂತೆ ಒಟ್ಟು 6,836 ಆರೋಗ್ಯ ಕಾರ್ಯಕರ್ತರಿಗೆ ಲಸಿಕೆ ನೀಡುವುದಕ್ಕೆ ಸಿದ್ಧತೆ ಮಾಡಿಕೊಳ್ಳಲಾಗಿತ್ತು. ಈ ಪೈಕಿ 3,803 (ಶೇ.56) ಆರೋಗ್ಯ ಕಾರ್ಯಕರ್ತರು ಮಾತ್ರ ಲಸಿಕೆ ಪಡೆದಿದ್ದಾರೆ. ಲಸಿಕೆ ಪಡೆದವರ ಪೈಕಿ 1,095 ಸರ್ಕಾರಿ ಮತ್ತು ಬಿಬಿಎಂಪಿಯ ಆರೋಗ್ಯ ಕಾರ್ಯಕರ್ತರು, 2,708 ಖಾಸಗಿ ಆಸ್ಪತ್ರೆಯ ಆರೋಗ್ಯ ಸಿಬ್ಬಂದಿ ಎಂದು ಬಿಬಿಎಂಪಿ ಮಾಹಿತಿ ನೀಡಿದೆ.

ಸಂಯುಕ್ತ ಕರ್ನಾಟಕ

## ಮೂರು ದಿನಗಳಲ್ಲಿ ವರದಿ ಸಲ್ಲಿಸಲು ತಾಕೀತು । ಕೋರ್ಟ್‌ಗೆ ನಿಖರವಾದ ಮಾಹಿತಿ ಅಗತ್ಯ

# ಒತ್ತುವರಿ ಧಾರ್ಮಿಕ ಕಟ್ಟಡಗಳ ಸಮೀಕ್ಷೆ

**ಸಂ.ಕ. ಸಮಾಚಾರ ಬೆಂಗಳೂರು**

ನಗರದಲ್ಲಿ ಪಾದಚಾರಿ ಮಾರ್ಗ, ರಸ್ತೆ, ಉದ್ಯಾನವನ, ಆಟದ ಮೈದಾನ ಹಾಗೂ ಸರ್ಕಾರಿ ಜಾಗವನ್ನು ಒತ್ತುವರಿ ಮಾಡಿಕೊಂಡು ನಿರ್ಮಾಣವಾಗಿರುವ ಧಾರ್ಮಿಕ ಸ್ಥಳಗಳ ಕುರಿತು ಮೂರು ದಿನಗಳಲ್ಲಿ ವರದಿ ನೀಡುವಂತೆ ಅಧಿಕಾರಿಗಳಿಗೆ ಬಿಬಿಎಂಪಿ ಆಯುಕ್ತ ಮಂಜುನಾಥ ಪ್ರಸಾದ್ ಸೂಚನೆ ನೀಡಿದ್ದಾರೆ.

ಬಿಬಿಎಂಪಿಯ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಧಾರ್ಮಿಕ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ ಬಿಬಿಎಂಪಿ ಆಯುಕ್ತ ಎನ್.ಮಂಜುನಾಥ ಪ್ರಸಾದ್ ಅವರು ಬುಧವಾರ ವಿಶೇಷ ಆಯುಕ್ತರು, ಜಂಟಿ ಆಯುಕ್ತರು ಹಾಗೂ ಇತರೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ನಗರದ ಅನೇಕ ಕಡೆ ಸಾರ್ವಜನಿಕ ಸ್ಥಳಗಳನ್ನು ಒತ್ತುವರಿ ಮಾಡಿಕೊಂಡು ಮಂದಿರ, ಮಸೀದಿ, ಚರ್ಚ್, ಗುರುದ್ವಾರ ಸೇರಿದಂತೆ ಇನ್ನಿತರ ಧಾರ್ಮಿಕ ಕಟ್ಟಡಗಳನ್ನು ನಿರ್ಮಾಣ ಮಾಡಿದ್ದಲ್ಲಿ ಅದರ ಕುರಿತು ವರದಿ ನೀಡಬೇಕೆಂದು ತಾಕೀತು ಮಾಡಿದ್ದಾರೆ.



ಸಾರ್ವಜನಿಕ ಸ್ಥಳಗಳಲ್ಲಿ ಅನಧಿಕೃತ ಧಾರ್ಮಿಕ ಕಟ್ಟಡಗಳನ್ನು ನಿರ್ಮಿಸುವಂತಿಲ್ಲ ಎಂದು ಸುಪ್ರೀಂಕೋರ್ಟ್ 2009ರಲ್ಲಿಯೇ ಆದೇಶ ಮಾಡಿದೆ. ನಗರದಲ್ಲಿ ಅನಧಿಕೃತವಾಗಿ ಧಾರ್ಮಿಕ ಕಟ್ಟಡ ನಿರ್ಮಾಣ ಕುರಿತು ಜ.28ರಂದು ಹೈಕೋರ್ಟ್‌ನಲ್ಲಿ ವಿಚಾರಣೆ ಇದೆ. ಕೋರ್ಟ್‌ಗೆ ನಿಖರವಾದ ಮಾಹಿತಿ ನೀಡಬೇಕಿದೆ. ಈ ಹಿನ್ನೆಲೆಯಲ್ಲಿ ಮೂರು ದಿನದಲ್ಲಿ ಸಮೀಕ್ಷೆ ನಡೆಸಿ ವರದಿ ನೀಡುವಂತೆ ಸೂಚಿಸಿದ ಅವರು, ಅನಧಿಕೃತವಾಗಿ ಸಾರ್ವಜನಿಕ ಸ್ಥಳಗಳಲ್ಲಿ ನಿರ್ಮಿಸಿರುವ ಧಾರ್ಮಿಕ ಕಟ್ಟಡಗಳ ಸಮೀಕ್ಷೆಯು ಅತ್ಯಂತ ಗಂಭೀರವಾದ ವಿಚಾರವಾಗಿದೆ. ಸಮೀಕ್ಷೆ ನಡೆಸುವಾಗ 2009ರ ಮುನ್ನ ಹಾಗೂ 2009ರ ನಂತರ ನಿರ್ಮಿಸಲಾದ ಧಾರ್ಮಿಕ ಕಟ್ಟಡಗಳನ್ನು ಎಲ್ಲಾ ವಾರ್ಡ್ ಎಂಜಿನಿಯರ್ ಹಾಗೂ ಕಂದಾಯ ಅಧಿಕಾರಿಗಳು ಸಮರ್ಪಕವಾಗಿ ಸಮೀಕ್ಷೆ ನಡೆಸಿ ವರದಿ ನೀಡಬೇಕು. ಜತೆಗೆ 2009ರ ನಂತರ ನಿರ್ಮಿಸಿದ ಧಾರ್ಮಿಕ ಕಟ್ಟಡಗಳಿಗೆ 27ರೊಳಗೆ ನೋಟಿಸ್ ಜಾರಿ ಮಾಡಿ ಧಾರ್ಮಿಕ ಕಟ್ಟಡಗಳು ನಿರ್ಮಿಸಿದವರಿಂದ ಒಂದು ವಾರದಲ್ಲಿ ಸಮಜಾಯಿಷಿ ಪಡೆಯಬೇಕೆಂದು ನಿರ್ದೇಶಿಸಿದ್ದಾರೆ. ವಿಶೇಷ ಆಯುಕ್ತರಾದ ಜೆ.ಮಂಜುನಾಥ್, ಬಸವರಾಜ್, ರಾಜೇಂದ್ರ ಚೋಳನ್, ತುಳಸಿ ಮದ್ದಿನೇನಿ, ರವೀಂದ್ರ ಮತ್ತಿತರರಿದ್ದರು.

> “ಹೈಕೋರ್ಟ್‌ಗೆ ವರದಿ ಸಲ್ಲಿಸಿದ ನಂತರ ಪೊಲೀಸ್ ಇಲಾಖೆಯ ಭದ್ರತೆಯೊಂದಿಗೆ ಸಾರ್ವಜನಿಕ ಸ್ಥಳಗಳಲ್ಲಿ ಅನಧಿಕೃತ ಧಾರ್ಮಿಕ ಕಟ್ಟಡಗಳನ್ನು ತೆರವುಗೊಳಿಸಲು ಕ್ರಮಕೈಗೊಳ್ಳಲಾಗಿದೆ.
>
> ■ **ಮಂಜುನಾಥ್ ಪ್ರಸಾದ್** | ಪಾಲಿಕೆ ಆಯುಕ್ತ

ಸಂಯುಕ್ತ ಕರ್ನಾಟಕ

# ಬೈಯಪ್ಪನಹಳ್ಳಿ ರಸ್ತೆಗೆ ನಾಲ್ಕು ಪಥ

- ನಾಲ್ಕು ಪಥದ ಮಾರ್ಗ ನಿರ್ಮಾಣ
- ಸುಗಮ ಸಂಚಾರಕ್ಕೆ ರಸ್ತೆ ವಿಸ್ತರಣೆ

**ಸಂ.ಕ.ಸಮಾಚಾರ ಬೆಂಗಳೂರು**

ಬಾಣಸವಾಡಿ ಮತ್ತು ಹಳೇ ಮದ್ರಾಸ್ ರಸ್ತೆಗೆ ಸಂಪರ್ಕ ಕಲ್ಪಿಸುವ ಬೈಯಪ್ಪನಹಳ್ಳಿ ರಸ್ತೆಯನ್ನು 4 ಪಥದ ಮಾರ್ಗವಾಗಿ ನಿರ್ಮಿಸುವಂತೆ ಆಡಳಿತಾಧಿಕಾರಿ ಗೌರವ್ ಗುಪ್ತ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಬೈಯಪ್ಪನಹಳ್ಳಿ ರೈಲ್ವೆ ಟರ್ಮಿನಲ್ ಸಂಪರ್ಕ ರಸ್ತೆಯ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ಬಳಿಕ ಮಾತನಾಡಿದ ಅವರು, ಬಾಣಸವಾಡಿ ಮತ್ತು ಹಳೇ ಮದ್ರಾಸ್ ರಸ್ತೆಗೆ ಸಂಪರ್ಕ ಮಾರ್ಗವಾಗಿರುವ ಬೈಯಪ್ಪನಹಳ್ಳಿಯಲ್ಲಿ ಹೊಸದಾಗಿ ರೈಲ್ವೆ ಟರ್ಮಿನಲ್ ನಿರ್ಮಾಣವಾಗುತ್ತಿದೆ. ಆದರೆ, ಈ ರಸ್ತೆ ಕಿರಿದಾಗಿದ್ದು ಸಾರ್ವಜನಿಕರ ಸುಗಮ ಸಂಚಾರಕ್ಕೆ ರಸ್ತೆ ವಿಸ್ತರಣೆ ಅಗತ್ಯವಿದೆ. ರೈಲು ಹಳಿಯ ಬಳಿ ಪಾಲಿಕೆ ಮತ್ತು ರೈಲ್ವೆ ಇಲಾಖೆ ಸಹಭಾಗಿತ್ವದಲ್ಲಿ ನಿರ್ಮಿಸುತ್ತಿರುವ ಮೇಲ್ಸೇತುವೆ ಕಾಮಗಾರಿ ಜೂನ್‌ಗೆ ಪೂರ್ಣಗೊಳಿಸಬೇಕು. ಜತೆಗೆ, ಮೇಲ್ಸೇತುವೆ ಮುಂದಿನ ರಸ್ತೆ ಕಿರಿದಾಗಿದ್ದು, 4 ಪಥದ ರಸ್ತೆ ನಿರ್ಮಾಣಕ್ಕೆ ಯೋಜನೆ ಮತ್ತು ವಿನ್ಯಾಸ ರೂಪಿಸುವಂತೆ ಸೂಚಿಸಿದರು.

ಕೆ.ಆರ್.ಪುರದ ಟಿನ್ ಫ್ಯಾಕ್ಟರಿ ಜಂಕ್ಷನ್ ಬಳಿ ಮೆಟ್ರೋ ಕಾಮಗಾರಿ ಪ್ರಗತಿಯಲ್ಲಿದೆ. ಇಲ್ಲಿ ನಿತ್ಯ 1,500 ಬಸ್‌ಗಳು ಸಂಚರಿಸಲಿದ್ದು ರಸ್ತೆ ಮಾರ್ಗದಲ್ಲಿ ಬಸ್‌ಗಳು ನಿಲ್ಲುವುದರಿಂದ ಸಂಚಾರ ದಟ್ಟಣೆಯಾಗುತ್ತಿದೆ. ಇದರಿಂದ ಮೆಟ್ರೋ ಕಾಮಗಾರಿಗೂ ಸಹ ಅಡಚಣೆಯಾಗುತ್ತಿದೆ. ಜಂಕ್ಷನ್ ಬಳಿ ಪಾಲಿಕೆಯ 1 ಎಕರೆ ಜಾಗವಿದ್ದು, ಬಿಎಂಆರ್‌ಸಿಎಲ್ ವತಿಯಿಂದ ಬಸ್ ಟರ್ಮಿನಲ್ ಹಾಗೂ ರಸ್ತೆ ನಿರ್ಮಾಣ ಮಾಡಲು ಕ್ರಮವಹಿಸಬೇಕು. ಈ ಸಂಬಂಧ ಬಿಬಿಎಂಪಿ, ಬಿಎಂಟಿಸಿ, ಟ್ರಾಫಿಕ್ ಪೊಲೀಸ್ ಇಲಾಖೆ ಹಾಗೂ ಬಿಎಂಆರ್‌ಸಿಎಲ್ ಅಧಿಕಾರಿಗಳು ಸೇರಿ ಸಮಸ್ಯೆಗಳನ್ನು ಇತ್ಯರ್ಥ ಮಾಡಿಕೊಂಡು ಕಾಮಗಾರಿ ಪ್ರಾರಂಭಿಸಬೇಕು ಎಂದು ನಿರ್ದೇಶನ ನೀಡಿದರು.

ಪಾಲಿಕೆ ಆಯುಕ್ತ ಎನ್.ಮಂಜುನಾಥ ಪ್ರಸಾದ್, ಬಿಎಂಆರ್‌ಸಿಎಲ್ ವ್ಯವಸ್ಥಾಪಕ ನಿರ್ದೇಶಕ ಅಜಯ್ ಸೇಠ್, ವಿಶೇಷ ಆಯುಕ್ತರಾದ ಮನೋಜ್ ಜೈನ್, ಡಿ.ರಂದೀಪ್, ಸಂಚಾರಿ ವಿಭಾಗದ ಜಂಟಿ ಪೊಲೀಸ್ ಆಯುಕ್ತ ರವಿಕಾಂತೇಗೌಡ, ಮಹದೇವಪುರ ವಲಯ ಜಂಟಿ ಆಯುಕ್ತರು ವೆಂಕಟಾಚಲಪತಿ ಮತ್ತಿತರರಿದ್ದರು.

ಸಂಯುಕ್ತ ಕರ್ನಾಟಕ Thu, 21 January 2021
epaper.samyukthakarnataka.

ಸಂಯುಕ್ತ ಕರ್ನಾಟಕ

# ಪಾಲಿಕೆ ಆಯುಕ್ತರಿಗೆ ಪ್ರಶಸ್ತಿ

**ಬೆಂಗಳೂರು:** ರಾಜ್ಯ ಚುನಾವಣಾ ಆಯೋಗದಿಂದ ಕೊಡಮಾಡುವ 2021ನೇ ಸಾಲಿನ ಉತ್ತಮ ಚುನಾವಣಾಧಿಕಾರಿ ಪ್ರಶಸ್ತಿಗೆ ಬಿಬಿಎಂಪಿ ಆಯುಕ್ತ ಹಾಗೂ ಬೆಂಗಳೂರು ನಗರ ಜಿಲ್ಲಾ ಚುನಾವಣಾಧಿಕಾರಿ ಎನ್. ಮಂಜುನಾಥ ಪ್ರಸಾದ್ ಭಾಜನರಾಗಿದ್ದಾರೆ.

ರಾಜ್ಯದಲ್ಲಿ ಕೋವಿಡ್ ನಡುವೆಯೂ ಅ.9 ರಿಂದ ನ.10ರವರೆಗೆ ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರದ ಉಪಚುನಾವಣೆ ಮಂಜುನಾಥ ಪ್ರಸಾದ್ ಅವರು ಯಶಸ್ವಿಯಾಗಿ ನಡೆಸಿದ್ದರು. ಈ ಹಿನ್ನೆಲೆಯಲ್ಲಿ ರಾಜ್ಯಮಟ್ಟದ ವಾರ್ಷಿಕ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ರಾಷ್ಟ್ರೀಯ ಮತದಾರರ ದಿನಾಚರಣೆ ಜ.25ರಂದು ಪುರಭವನದಲ್ಲಿ ಆಯೋಜಿಸುವ ರಾಜ್ಯಮಟ್ಟದ ಕಾರ್ಯಕ್ರಮದಲ್ಲಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ.

ಸಂಯುಕ್ತ ಕರ್ನಾಟ

ಸಂಯುಕ್ತ ಕರ್ನಾಟಕ

# ರಸ್ತೆ ಕಾಮಗಾರಿ ಪೂರ್ಣಕ್ಕೆ ಗಡುವು

**ಸಂ.ಕ.ಸಮಾಚಾರ ಬೆಂಗಳೂರು**

- ಫೆ.3ರಿಂದ ವೈಮಾನಿಕ ಪ್ರದರ್ಶನ
- 12 ರಸ್ತೆಗಳ ಅಭಿವೃದ್ಧಿ
- ವೈಟ್‌ಟಾಪಿಂಗ್ ಕಾಮಗಾರಿ

ಯಲಹಂಕ ವಾಯುನೆಲೆಯಲ್ಲಿ ಫೆಬ್ರವರಿ 3ರಿಂದ 5ರವರೆಗೆ ಏರೋ ಇಂಡಿಯಾ ವೈಮಾನಿಕ ಪ್ರದರ್ಶನ ನಡೆಯಲಿರುವ ಹಿನ್ನೆಲೆಯಲ್ಲಿ ಈ ಭಾಗದಲ್ಲಿ ರಸ್ತೆ ದುರಸ್ತಿ ಸೇರಿದಂತೆ ಎಲ್ಲ ಅಭಿವೃದ್ಧಿ ಕಾಮಗಾರಿಗಳನ್ನು ಜ.25ರೊಳಗೆ ಪೂರ್ಣಗೊಳಿಸುವಂತೆ ಬಿಬಿಎಂಪಿ ಯೋಜನಾ ವಿಭಾಗದ ವಿಶೇಷ ಆಯುಕ್ತ ಮನೋಜ್ ಜೈನ್ ಸೂಚಿಸಿದ್ದಾರೆ.

ಏರೋ ಇಂಡಿಯಾ ವೈಮಾನಿಕ ಪ್ರದರ್ಶನದ ಹಿನ್ನೆಲೆಯಲ್ಲಿ ಯಲಹಂಕ ವಾಯುನೆಲೆಯ ಸುತ್ತಮುತ್ತಲಿನ ರಸ್ತೆಗಳ ದುರಸ್ತಿ ಹಾಗೂ ಅಭಿವೃದ್ಧಿ ಕುರಿತು ಬಿಬಿಎಂಪಿ ಯೋಜನಾ ವಿಭಾಗದ ವಿಶೇಷ ಆಯುಕ್ತ ಮನೋಜ್ ಜೈನ್ ಅವರು ಬಿಬಿಎಂಪಿ ಮುಖ್ಯರಸ್ತೆ ಹಾಗೂ ಯೋಜನಾ ವಿಭಾಗದ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಏರೋ ಇಂಡಿಯಾ ವೈಮಾನಿಕ ಪ್ರದರ್ಶನ ಆರಂಭಗೊಳ್ಳಲಿದೆ. ದೇಶ–ವಿದೇಶದ ಉದ್ಯಮಿಗಳು, ಗಣ್ಯರು ಸೇರಿದಂತೆ ಲಕ್ಷಾಂತರ ಮಂದಿ ಆಗಮಿಸುವ ಸಾಧ್ಯತೆ ಇದೆ. ಹೀಗಾಗಿ, ವಾಯುನೆಲೆಯ ಸುತ್ತಮುತ್ತಲ ರಸ್ತೆಗಳ ಅಭಿವೃದ್ಧಿ ಮತ್ತು ದುರಸ್ತಿ ಕಾಮಗಾರಿಗಳನ್ನು ಜ.25ರೊಳಗಾಗಿ ಪೂರ್ಣಗೊಳಿಸಬೇಕೆಂದು ಗಡುವು ನೀಡಿದ್ದಾರೆ.

ಬಿಬಿಎಂಪಿ ಥಣಿಸಂದ್ರ ಮುಖ್ಯರಸ್ತೆಯಲ್ಲಿ ಒಟ್ಟು 9 ಕಿ.ಮೀ ವೈಟ್‌ಟಾಪಿಂಗ್ ಕಾಮಗಾರಿ ನಡೆಸುತ್ತಿದ್ದು, ತ್ವರಿತವಾಗಿ ಮುಗಿಸುವಂತೆ ಸೂಚಿಸಲಾಗಿದೆ. ಇನ್ನು ಥಣಿಸಂದ್ರ ರಸ್ತೆಯಲ್ಲಿ ರಾಷ್ಟ್ರೋತ್ಥಾನದ ಬಳಿ ಕಳೆದ ಮೂರು ವರ್ಷದಿಂದ ನಡೆಯುತ್ತಿರುವ ಫ್ಲೈಓವರ್ ಕಾಮಗಾರಿ ಪೂರ್ಣಗೊಳಿಸಿ ಏರೋ ಶೋ ವೇಳೆ ವಾಹನ ಸಂಚಾರಕ್ಕೆ ಮುಕ್ತಗೊಳಿಸುವಂತೆ ನಿರ್ದೇಶನ ನೀಡಲಾಗಿದೆ.

ಉಳಿದಂತೆ ಬಾಗಲೂರು ಮತ್ತು ಕೋಗಿಲು ಮುಖ್ಯ ರಸ್ತೆಗಳಲ್ಲಿ ಗುಂಡಿ ಭರ್ತಿ, ಮಳೆ ನೀರುಗಾಲುವೆ ಸ್ವಚ್ಛಗೊಳಿಸುವುದು, ರಸ್ತೆಯ ಪಕ್ಕದಲ್ಲಿ ಸುರಿಯಾದ ತ್ಯಾಜ್ಯ ಹಾಗೂ ಕಟ್ಟಡ ತ್ಯಾಜ್ಯ ತೆರವುಗೊಳಿಸುವುದಕ್ಕೆ ಸೂಚನೆ ನೀಡಿದ್ದಾರೆ.

ಬಿಬಿಎಂಪಿಯ ಜತೆಗೆ ಲೋಕೋಪಯೋಗಿ ಇಲಾಖೆಯಿಂದ ಸಹ ನಿಟ್ಟೆ ಮೀನಾಕ್ಷಿ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಮೂಲಕ ರಾಜ್ಯ ಹೆದ್ದಾರಿವರೆಗಿನ ರಸ್ತೆ ಸೇರಿದಂತೆ 12 ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ.

ಹೊಸ ದಿಗಂತ

# ಅನಧಿಕೃತ ಕಟ್ಟಡ ಗುರುತಿಸಲು ಸೂಚನೆ

**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಯಲ್ಲಿ ಸಾರ್ವಜನಿಕ ಪ್ರದೇಶಗಳಲ್ಲಿ ಅನಧಿಕೃತವಾಗಿ ನಿರ್ಮಿಸಲಾದ ಧಾರ್ಮಿಕ ಕಟ್ಟಡಗಳ ಕುರಿತು 3 ದಿನದೊಳಗೆ ಸಮೀಕ್ಷಾ ವರದಿ ಸಲ್ಲಿಸುವಂತೆ ವಾರ್ಡ್ ಅಧಿಕಾರಿಗಳಿಗೆ ಬಿಬಿಎಂಪಿ ಆಯುಕ್ತ ನ್.ಮಂಜುನಾಥಪ್ರಸಾದ್ ಸೂಚಿಸಿದ್ದಾರೆ.ನಗರದಲ್ಲಿ ಅನಧಿಕೃತವಾಗಿ ನಿರ್ಮಿಸಲಾದ ಧಾರ್ಮಿಕ ಕಟ್ಟಡಗಳನ್ನು ಗುರುತಿಸುವ ಕುರಿತು ಸಭೆ ನಡೆಸಿ ಮಾತನಾಡಿದ ಅವರು, ಸಾರ್ವಜನಿಕ ಪ್ರದೇಶಗಳಾದ ರಸ್ತೆಗಳು, ಪಾದಾಚಾರಿ ಮಾರ್ಗ, ಉದ್ಯಾವನ, ಆಟದ ಮೈದಾನ ಹಾಗೂ ಸರ್ಕಾರಿ ಸ್ವಾಮ್ಯದ ಖಾಲಿ ನಿವೇಶನದಲ್ಲಿ ಧಾರ್ಮಿಕ ಕಟ್ಟಡ ನಿರ್ಮಿಸಲಾಗಿದೆ. ಆದರೆ, ಸುಪ್ರೀಂ ಕೋರ್ಟ್ 2009ರಲ್ಲಿಯೇ ಸಾರ್ವಜನಿಕ ಸ್ಥಳಗಳಲ್ಲಿ ಅನಧಿಕೃತ ಧಾರ್ಮಿಕ ಕಟ್ಟಡಗಳನ್ನು ನಿರ್ಮಿಸುವಂತಿಲ್ಲ ಎಂದು ಆದೇಶ ಮಾಡಿದೆ. ಅನಧಿಕೃತವಾಗಿ ಧಾರ್ಮಿಕ ಕಟ್ಟಡ ನಿರ್ಮಾಣ ಕುರಿತು ಜ.28ರಂದು ಹೈಕೋರ್ಟ್‌ನಲ್ಲಿ ವಿಚಾರಣೆಯಿದ್ದು, ನ್ಯಾಯಾಲಯಕ್ಕೆ ನಿಖರ ಮಾಹಿತಿ ನೀಡಬೇಕಿದೆ. ಈ ಹಿನ್ನೆಲೆಯಲ್ಲಿ 3 ದಿನದಲ್ಲಿ ಸಮೀಕ್ಷೆ ನಡೆಸಿ ವರದಿ ನೀಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಹೊಸ ದಿಗಂತ

# 3,803 ಆರೋಗ್ಯ ಕಾರ್ಯಕರ್ತರಿಗೆ ಲಸಿಕೆ



**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಯಲ್ಲಿ ಬುಧವಾರ 3,803 (ಶೇ.56) ಆರೋಗ್ಯ ಕಾರ್ಯಕರ್ತರಿಗೆ ಲಸಿಕೆ ಹಾಕಲಾಗಿದೆ. ನಗರದಲ್ಲಿ 21 ಸರ್ಕಾರಿ ಆಸ್ಪತ್ರೆ ಮತ್ತು 58 ಖಾಸಗಿ ಆಸ್ಪತ್ರೆಗಳು ಸೇರಿ ಒಟ್ಟು 79 ಕೇಂದ್ರಗಳಲ್ಲಿ ಕೋವಿಡ್ ಲಸಿಕೆ ನೀಡಲಾಯಿತು. ಸರ್ಕಾರಿ ಆಸ್ಪತ್ರೆಯ 1095 ಹಾಗೂ ಖಾಸಗಿ ಆಸ್ಪತ್ರೆಯ 2708 ಆರೋಗ್ಯ ಸಿಬ್ಬಂದಿ ಸೇರಿ ಒಟ್ಟು 3,806 ಮಂದಿ ಲಸಿಕೆ ಪಡೆದಿದ್ದಾರೆ.

ಜನದನಿಯ ಸಾರಥಿ
ವಾರ್ತಾ ಭಾರತಿ

ಜನದನಿಯ ಸಾರಥಿ
ವಾರ್ತಾ ಭಾರತಿ

## ಬಿಬಿಎಂಪಿ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಧಾರ್ಮಿಕ ಕಟ್ಟಡಗಳ ನಿರ್ಮಾಣ

# 3 ದಿನಗಳಲ್ಲಿ ವರದಿ ನೀಡಿ

## ಅಧಿಕಾರಿಗಳಿಗೆ ಆಯುಕ್ತರ ಸೂಚನೆ

ಬೆಂಗಳೂರು, ಜ.20: ಬಿಬಿಎಂಪಿ ವ್ಯಾಪ್ತಿಯ ರಸ್ತೆ, ಪಾದಚಾರಿ ಮಾರ್ಗ, ಉದ್ಯಾನ, ಆಟದ ಮೈದಾನ, ಸರಕಾರಿ ಜಾಗ ಸೇರಿದಂತೆ ಸಾರ್ವಜನಿಕ ಸ್ಥಳಗಳನ್ನು ಅತಿಕ್ರಮಿಸಿ ಅನಧಿಕೃತವಾಗಿ ನಿರ್ಮಿಸಿರುವ ಮಂದಿರ, ಮಸೀದಿ, ಚರ್ಚ್, ಗುರುದ್ವಾರ ಸೇರಿದಂತೆ ಧಾರ್ಮಿಕ ಕಟ್ಟಡಗಳನ್ನು 3 ದಿನಗಳಲ್ಲಿ ಸಮೀಕ್ಷೆ ಮಾಡಿ ಸಮಗ್ರ ವರದಿ ನೀಡಬೇಕೆಂದು ಅಧಿಕಾರಿಗಳಿಗೆ ಬಿಬಿಎಂಪಿ ಆಯುಕ್ತ ಎನ್. ಮಂಜುನಾಥ್ ಪ್ರಸಾದ್ ಸೂಚನೆ ನೀಡಿದ್ದಾರೆ.

ಬುಧವಾರ ಬಿಬಿಎಂಪಿಯ ವಾರ್ ರೂಂನಲ್ಲಿ ಅಧಿಕಾರಿಗಳೊಂದಿಗೆ ವೀಡಿಯೊ ಕಾನ್ಫರೆನ್ಸ್ ನಡೆಸಿದ ಅವರು, ಸಾರ್ವಜನಿಕ ಸ್ಥಳಗಳಲ್ಲಿ ಅನಧಿಕೃತ ಧಾರ್ಮಿಕ ಕಟ್ಟಡಗಳನ್ನು ನಿರ್ಮಿಸಿರುವ ಬಗ್ಗೆ 2009ರಲ್ಲಿ ಸುಪ್ರೀಂಕೋರ್ಟ್‌ನಲ್ಲಿ ಪಿಐಎಲ್ ದಾಖಲಿಸಲಾಗಿದ್ದು, ಇದು ಕೇವಲ ಬಿಬಿಎಂಪಿಗೆ ಮಾತ್ರವಲ್ಲದೆ ದೇಶಕ್ಕೆ ಅನ್ವಯವಾಗಲಿದೆ. ಈ ಪೈಕಿ 2009ರ ಸೆ.29ರಂದು ಸಾರ್ವಜನಿಕ ಸ್ಥಳಗಳಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ಧಾರ್ಮಿಕ ಕಟ್ಟಡಗಳ ಬಗ್ಗೆ ಸಮೀಕ್ಷೆ ನಡೆಸಿ ವರದಿ ನೀಡಬೇಕೆಂಬ ಆದೇಶವಾಗಿದೆ ಎಂದರು.

ಈ ಆದೇಶದಲ್ಲಿ 2009ರ ಮುನ್ನ ನಿರ್ಮಿಸಿರುವ ಅನಧಿಕೃತ ಧಾರ್ಮಿಕ ಕಟ್ಟಡಗಳನ್ನು ಬೇರೆಡೆ ಸ್ಥಳಾಂತರ/ತೆರವುಗೊಳಿಸುವ ಕಾರ್ಯ ಮಾಡಬೇಕು. 2009ರ ಸೆ.29ರ ನಂತರ ಸಾರ್ವಜನಿಕ ಸ್ಥಳಗಳಲ್ಲಿ ಯಾವುದೇ ರೀತಿಯ ಧಾರ್ಮಿಕ ಕಟ್ಟಡಗಳನ್ನು ನಿರ್ಮಿಸುವಂತಿಲ್ಲ ಎಂಬ ಆದೇಶವಿದೆ ಎಂದು ಮಂಜುನಾಥ್ ಪ್ರಸಾದ್ ತಿಳಿಸಿದರು.

ಸರಕಾರಿ ಹಾಗೂ ಖಾಸಗಿ ಜಾಗದಲ್ಲಿ ಧಾರ್ಮಿಕ ಕಟ್ಟಡಗಳನ್ನು ನಿರ್ಮಿಸಲಾಗಿರುತ್ತದೆ. ಈ ಪೈಕಿ ಖಾಸಗಿ ಜಾಗದಲ್ಲಿ ನಿರ್ಮಿಸಿರುವ ಧಾರ್ಮಿಕ ಕಟ್ಟಡಗಳನ್ನು ಹೊರತುಪಡಿಸಿ ಸರಕಾರಿ ಜಾಗವನ್ನು ಒತ್ತುವರಿ ಮಾಡಿಕೊಂಡು ಸಾರ್ವಜನಿಕ ಸ್ಥಳಗಳಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ಧಾರ್ಮಿಕ ಕಟ್ಟಡಗಳ ಪಟ್ಟಿಯನ್ನು ಸಿದ್ಧಪಡಿಸಬೇಕು. ಈ



ಸಂಬಂಧ 2009ರ ಮುನ್ನ ಹಾಗೂ 2009ರ ನಂತರ ನಿರ್ಮಿಸಲಾದ ಧಾರ್ಮಿಕ ಕಟ್ಟಡಗಳನ್ನು ಎಲ್ಲ ವಾರ್ಡ್ ಇಂಜಿನಿಯರ್ ಹಾಗೂ ಕಂದಾಯ ಅಧಿಕಾರಿಗಳು ಸಮರ್ಪಕವಾಗಿ ಸಮೀಕ್ಷೆ ನಡೆಸಿ 3 ದಿನಗಳಲ್ಲಿ ನಿಖರವಾದ ಪಟ್ಟಿಯನ್ನು ಸಿದ್ಧಪಡಿಸಿ ವರದಿ ನೀಡಬೇಕು ಎಂದು ಅವರು ಸೂಚನೆ ನೀಡಿದರು.

ಇದೇ ಜ.28ರಂದು ಧಾರ್ಮಿಕ ಕಟ್ಟಡಗಳ ವಿಚಾರವಾಗಿ ಹೈಕೋರ್ಟ್‌ನಲ್ಲಿ ವಿಚಾರಣೆಯಿದ್ದು, ಈ ವಿಚಾರಣೆಯಲ್ಲಿ ನಿಖರವಾದ ಮಾಹಿತಿ ನೀಡಬೇಕು. ಅನಧಿಕೃತವಾಗಿ ಸಾರ್ವಜನಿಕ ಸ್ಥಳಗಳಲ್ಲಿ ನಿರ್ಮಿಸಿರುವ ಧಾರ್ಮಿಕ ಕಟ್ಟಡಗಳ ಸಮೀಕ್ಷೆಯು ಅತ್ಯಂತ ಗಂಭೀರವಾದ ವಿಚಾರವಾಗಿದೆ. ಆದುದರಿಂದ, ಯಾವ ಅಧಿಕಾರಿಯೂ ಇದನ್ನು ಕಡೆಗಣಿಸುವಂತಿಲ್ಲ. ಪಾಲಿಕೆಯ ಎಲ್ಲ 8 ವಲಯಗಳ ಸಾರ್ವಜನಿಕ ಸ್ಥಳಗಳಲ್ಲಿ ಅನಧಿಕೃತ ಧಾರ್ಮಿಕ ಕಟ್ಟಡಗಳ ಪಟ್ಟಿಮಾಡಿ ವರದಿ ನೀಡಬೇಕು. ಜೊತೆಗೆ 2009ರ ನಂತರ ನಿರ್ಮಿಸಿರುವ ಧಾರ್ಮಿಕ ಕಟ್ಟಡಗಳಿಗೆ 27ರೊಳಗೆ ನೋಟಿಸ್ ಜಾರಿ ಮಾಡಿ ಧಾರ್ಮಿಕ ಕಟ್ಟಡಗಳು ನಿರ್ಮಿಸಿರುವವರಿಂದ 1 ವಾರದಲ್ಲಿ ಆ ಬಗ್ಗೆ ಸಮಜಾಯಿಷಿ ಪಡೆಯಬೇಕು ಎಂದು ಅವರು ಸೂಚನೆ ನೀಡಿದರು.

ಧಾರ್ಮಿಕ ಕಟ್ಟಡಗಳ ಸಮೀಕ್ಷೆಯನ್ನು ಎಲ್ಲ ಅಧಿಕಾರಿಗಳು ಒಂದೇ ಮಾದರಿಯಲ್ಲಿ ಮಾಡಬೇಕು. ವಲಯದ ಹೆಸರು, ದೇವಸ್ಥಾನ/ಚರ್ಚ್/ಮಸೀದಿ/ಗುರುದ್ವಾರದ ಹೆಸರು, ಯಾವ ವಾರ್ಡ್ ಮತ್ತು ವಾರ್ಡ್ ಸಂಖ್ಯೆ, ವಿಳಾಸ, ಧಾರ್ಮಿಕ ಕಟ್ಟಡಗಳನ್ನು 2009ರ ಮುನ್ನ ಹಾಗೂ 2009ರ ನಂತರ ನಿರ್ಮಾಣ ಮಾಡಿರುವ ಬಗ್ಗೆ ಹಾಗೂ ಎಷ್ಟು ಅಳತೆಯಲ್ಲಿ ದೇವಸ್ಥಾನವಿದೆ ಎಂಬ ಜಾಗದ ಅಂದಾಜು ಮಾಹಿತಿಯನ್ನು ನೀಡಬೇಕು ಎಂದು ಅವರು ಹೇಳಿದರು.

ಈ ಸಂಬಂಧ ಒಂದು ಮಾದರಿ(ಫಾರ್ಮೆಟ್) ನೀಡಲಾಗುತ್ತದೆ. ಅದರಂತೆ ಸಮೀಕ್ಷೆ ನಡೆಸಿ ಸಮಗ್ರ ಮಾಹಿತಿಯನ್ನು ತ್ವರಿತವಾಗಿ ಸಿದ್ಧಪಡಿಸಿಕೊಡಬೇಕು. ಪಟ್ಟಿ ಮಾಡಿರುವ ಧಾರ್ಮಿಕ ಕಟ್ಟಡಗಳ ಛಾಯಾಚಿತ್ರಗಳನ್ನು ಕೂಡಾ ವರದಿಯಲ್ಲಿ ಲಗತ್ತಿಸಿರಬೇಕು. ಹೈಕೋರ್ಟ್‌ಗೆ ವರದಿ ಸಲ್ಲಿಸಿದ ನಂತರ ಪೊಲೀಸ್ ಇಲಾಖೆಯ ಭದ್ರತೆಯೊಂದಿಗೆ ಸಾರ್ವಜನಿಕ ಸ್ಥಳಗಳಲ್ಲಿ ಅನಧಿಕೃತ ಧಾರ್ಮಿಕ ಕಟ್ಟಡಗಳನ್ನು ತೆರವುಗೊಳಿಸಲು ಕ್ರಮವಹಿಸಬೇಕು ಎಂದು ಮಂಜುನಾಥ್ ಪ್ರಸಾದ್ ತಿಳಿಸಿದರು.

ಈ ವೇಳೆ ಬಿಬಿಎಂಪಿ ವಿಶೇಷ ಆಯುಕ್ತರಾದ ಜೆ.ಮಂಜುನಾಥ್, ಬಸವರಾಜ್, ರಾಜೇಂದ್ರ ಚೋಳನ್, ರವೀಂದ್ರ, ತುಳಸಿ ಮದ್ದಿನೇನಿ ಉಪಸ್ಥಿತರಿದ್ದರು. ಹಾಗೂ ಎಲ್ಲ ವಲಯಗಳ ಜಂಟಿ ಆಯುಕ್ತರು, ಮುಖ್ಯ ಇಂಜಿನಿಯರ್‌ಗಳು, ಕಾರ್ಯಪಾಲಕ ಇಂಜಿನಿಯರ್‌ಗಳು, ಸಹಾಯಕ ಕಾರ್ಯಪಾಲಕ/ಸಹಾಯಕ ಇಂಜಿನಿಯರ್‌ಗಳು, ಕಂದಾಯ ಅಧಿಕಾರಿಗಳು ಹಾಗೂ ಇನ್ನಿತರ ಸಂಬಂಧಪಟ್ಟ ಅಧಿಕಾರಿಗಳು ವೀಡಿಯೊ ಕಾನ್ಫರೆನ್ಸ್ ಮೂಲಕ ಸಭೆಯಲ್ಲಿ ಭಾಗವಹಿಸಿದ್ದರು.

ಸಂಜೆವಾಣಿ
1982

# ರಸ್ತೆಗುಂಡಿ ಚಿತ್ರ ರವಾನಿಸಲು ನಾಗರಿಕರಿಗೆ ಕೋರ್ಟ್ ಅವಕಾಶ



**ಬೆಂಗಳೂರು,ಜ.20**-ರಾಜಧಾನಿ ಬೆಂಗಳೂರಿನ ರಸ್ತೆ ಗುಂಡಿಗಳ ಕುರಿತು ಚಿತ್ರಗಳನ್ನು ಇದೀಗ ಹೈಕೋರ್ಟ್ ಗೆ ಮುಟ್ಟಿಸಲು ಸಾರ್ವಜನಿಕರು ಅವಕಾಶ ಕಲ್ಪಿಸಲಾಗಿದೆ.

ಸಾರ್ವಜನಿಕರಿಂದಲೇ ನಗರದ ರಸ್ತೆಗುಂಡಿಗಳ ಬಗ್ಗೆ ಮಾಹಿತಿ ಸಂಗ್ರಹಿಸಲು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಮುಂದಾಗಿದ್ದು, ಇದಕ್ಕೆ ಚಿತ್ರಗಳು ಸಲ್ಲಿಸಿದರೆ ಹೈಕೋರ್ಟ್ ತಲುಪಲಿವೆ.

ಬಿಬಿಎಂಪಿ ನಡೆಸಿರುವ ರಸ್ತೆಗುಂಡಿ ಮುಚ್ಚುವ ಕಾಮಗಾರಿಯ ಗುಣಮಟ್ಟವನ್ನು ಪರಿಶೀಲಿಸುವಂತೆ ಪ್ರಾಧಿಕಾರಕ್ಕೆ ಹೈಕೋರ್ಟ್ ನಿರ್ದೇಶನ ನೀಡಿರುವ ಹಿನ್ನೆಲೆಯಲ್ಲಿ ಸಾಲ್ವ್ ನಿಂಜಾ ಎಂಬ ಸ್ವಯಂಸೇವಕ ಸಂಸ್ಥೆಯ ಸಹಕಾರದೊಂದಿಗೆ ರಸ್ತೆಗುಂಡಿಗಳ ಬಗ್ಗೆ ಸಾರ್ವಜನಿಕರಿಂದಲೇ ಮಾಹಿತಿ ಪಡೆದು ನ್ಯಾಯಾಲಯಕ್ಕೆ ಒದಗಿಸಲಾಗುತ್ತದೆ. ಅದಕ್ಕಾಗಿ ವಾಟ್ಸಾಪ್ ಸಂಖ್ಯೆಯನ್ನು ನಿಗದಿಪಡಿಸಿದೆ.

ಮನೆ ಹಾಗೂ ಕಚೇರಿ ಸೇರಿ ನಿತ್ಯ ಸಂಚರಿಸುವ ಪ್ರದೇಶಗಳಲ್ಲಿ ರಸ್ತೆ ಗುಂಡಿಗಳು ಅಥವಾ ಪಾದಚಾರಿ ಮಾರ್ಗಗಳ ಸಮಸ್ಯೆ ಕಂಡರೂ ಆ ಬಗ್ಗೆ ಸಂಪೂರ್ಣ ಮಾಹಿತಿಯನ್ನು ಪ್ರಾಧಿಕಾರಕ್ಕೆ ವಾಟ್ಸಾಪ್ ಮೂಲಕ ಕಳುಹಿಸಬಹುದು.

(ಎರಡನೇ ಪುಟ ನೋಡಿ)

# ನಾಗರಿಕರಿಗೆ ಕೋರ್ಟ್ ಅವಕಾಶ

ಇದೇ ತಿಂಗಳ 30ರವರೆಗೆ ಎಷ್ಟು ಸಾಧ್ಯವೋ ಅಷ್ಟು ರಸ್ತೆಗುಂಡಿಗಳ ಮಾಹಿತಿ ನೀಡಲು ಅವಕಾಶವಿದೆ. ಸಾರ್ವಜನಿಕರು ಒದಗಿಸುವ ಎಲ್ಲಾ ವಿವರಗಳನ್ನು ಒಟ್ಟುಗೂಡಿಸಿ, ಹೈಕೋರ್ಟ್‌ಗೆ ಸಮಗ್ರ ವರದಿ ಸಲ್ಲಿಸಲಾಗುವುದಾಗಿ ಪ್ರಾಧಿಕಾರ ತಿಳಿಸಿದೆ.

ಪ್ರಾಧಿಕಾರ ನೀಡಲಾಗಿರುವ 8095500118 ವಾಟ್ಸಾಪ್ ಸಂಖ್ಯೆಗೆ ಸಾರ್ವಜನಿಕರುಃಜಟರಿಭಜಟಿರಚಿಟಣಡಿಣ ಎಂಬ ಕೋಡ್ ಕಳುಹಿಸಬೇಕು. ಕನ್ನಡ ಅಥವಾ ಇಂಗ್ಲಿಷ್ ಭಾಷೆ ಆಯ್ಕೆ ಮಾಡಿಕೊಳ್ಳಬೇಕು. ಅಲ್ಲಿ ಬರುವ ಸೂಚನೆಗಳನ್ನು ಅನುಸರಿಸಿ ಚಿತ್ರಗಳನ್ನು ಕಳುಹಿಸಬಹುದಾಗಿದೆ.

ಸಮಸ್ತ ಕನ್ನಡಿಗರ ನಂ.1 ಸಂಜೆ ದಿನಪತ್ರಿಕೆ

ಈ ಸಂಜೆ

# ಲಸಿಕೆ ಪಡೆಯುವಲ್ಲಿ ಕರ್ನಾಟಕವೇ ಪ್ರಥಮ

**ಬೆಂಗಳೂರು, ಜ.20-** ವಿಶ್ವದ ಬೃಹತ್ ಕೊರೊನಾ ಲಸಿಕಾ ಆಂದೋಲನ ಎಂಬ ಖ್ಯಾತಿಗೆ ಪಾತ್ರವಾಗಿರುವ ಭಾರತದ ಲಸಿಕಾ ಅಭಿಯಾನದಲ್ಲಿ ಅತಿ ಹೆಚ್ಚು ಲಸಿಕೆ ಪಡೆದಿರುವುದು ಕರ್ನಾಟಕದವರೇ ಎಂಬುದು ಜಗಜ್ಜಾಹೀರಾಗಿದೆ.

ನಿನ್ನೆಯವರೆಗೂ ದೇಶಾದ್ಯಂತ 6.31 ಲಕ್ಷ ಆರೋಗ್ಯ ಇಲಾಖೆ ಸಿಬ್ಬಂದಿಗಳು ಲಸಿಕೆ ಪಡೆದಿದ್ದು, ಇದರಲ್ಲಿ ಕರ್ನಾಟಕದ 80,686 ಮಂದಿ ಲಸಿಕೆ ಪಡೆದಿದ್ದಾರೆ.

ಇದರೊಂದಿಗೆ ಅತಿ ಹೆಚ್ಚು ಲಸಿಕೆ ಹಾಕುವಲ್ಲಿ ಕರ್ನಾಟಕ ಪ್ರಥಮ ಸ್ಥಾನದಲ್ಲಿದೆ. ಉಳಿದಂತೆ 69,405 ಮಂದಿ ಲಸಿಕೆ ಹಾಕಿರುವ ತೆಲಂಗಾಣ ದ್ವಿತೀಯ ಸ್ಥಾನದಲ್ಲಿದೆ.

ಆಂಧ್ರ ಪ್ರದೇಶದಲ್ಲಿ 58,495, ಅಂಡಮಾನ್- ನಿಕೋಬಾರ್‌ನಲ್ಲಿ 644, ಅರುಣಾಚಲ ಪ್ರದೇಶದಲ್ಲಿ 2805, ಅಸ್ಸೋಂನಲ್ಲಿ 7418, ಬಿಹಾರದಲ್ಲಿ 42,085, ಚಂಡೀಗಢದಲ್ಲಿ 485, ಛತ್ತೀಸ್‌ಗಢದಲ್ಲಿ 10,872, ಡೆಲ್ಲಿ 12,441, ಹರಿಯಾಣ 24,944, ಕೇರಳ 23,855, ಮಹಾರಾಷ್ಟ್ರ 30,247, ಒಡಿಶಾದಲ್ಲಿ 55,138, ಪಶ್ಚಿಮ ಬಂಗಾಳದಲ್ಲಿ 42,093 ಮಂದಿ ಸೇರಿದಂತೆ ಇದುವರೆಗೂ 6.31 ಲಕ್ಷ ಮಂದಿ ಕೋವಿಶೀಲ್ಡ್ ಕೊರೊನಾ ಲಸಿಕೆ ಪಡೆದಿದ್ದಾರೆ.

ಇನ್ನೂ ಲಸಿಕಾ ವಿತರಣೆ ಕಾರ್ಯಕ್ರಮ ಮುಂದುವರಿದಿದ್ದು, ಎರಡನೆ ಹಂತದಲ್ಲಿ ಕೊರೊನಾ ವಾರಿಯರ್ಸ್‌ಗಳು ಹಾಗೂ ಮೂರನೆ ಹಂತದಲ್ಲಿ 50 ವರ್ಷ ಮೇಲ್ಪಟ್ಟವರು ಸೇರಿದಂತೆ ಒಟ್ಟಾರೆ 3 ಕೋಟಿ ಮಂದಿಗೆ ಲಸಿಕೆ ನೀಡಲಾಗುತ್ತಿದೆ.

ಇದುವರೆಗೂ ಬೆರಳೆಣಿಕೆಯಷ್ಟು ಮಂದಿಗೆ ಮಾತ್ರ ಅಲ್ಪ ಪ್ರಮಾಣದ ಅಡ್ಡ ಪರಿಣಾಮಗಳು ಕಂಡುಬಂದಿವೆ. ದೆಹಲಿಯಲ್ಲಿ ಅಡ್ಡ ಪರಿಣಾಮ ಕಂಡುಬಂದ 9 ಮಂದಿಯನ್ನು ಆಸ್ಪತ್ರೆಗೆ ಸೇರಿಸಲಾಗಿದ್ದು, ಈಗಾಗಲೇ ಮೂರು ಮಂದಿ ಡಿಸ್ಚಾರ್ಜ್ ಆಗಿದ್ದಾರೆ.

ಉತ್ತರಾಖಂಡದಲ್ಲಿ ಕೇವಲ ಒಬ್ಬ ವ್ಯಕ್ತಿಗೆ ತುರಿಕೆ ಕಂಡುಬಂದು ಆತನಿಗೆ ಚಿಕಿತ್ಸೆ ನೀಡಲಾಗಿದೆ. ಕರ್ನಾಟಕದಲ್ಲಿ ಒಬ್ಬ ವ್ಯಕ್ತಿಯನ್ನು ಆಸ್ಪತ್ರೆಯಿಂದ ಬಿಡುಗಡೆ ಮಾಡಲಾಗಿದ್ದು, ಮತ್ತೊಬ್ಬರು ಚಿತ್ರದುರ್ಗ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಒಟ್ಟಾರೆ ಇಡೀ ದೇಶದಾದ್ಯಂತ ನಡೆದ ಲಸಿಕಾ ಆಂದೋಲನದಲ್ಲಿ ಕೇವಲ ಬೆರಳೆಣಿಕೆಯಷ್ಟು ಮಂದಿಗೆ ಮಾತ್ರ ಅಡ್ಡ ಪರಿಣಾಮ ಕಂಡುಬಂದಿರುವುದರಿಂದ ಲಸಿಕಾ ಆಂದೋಲನ ಪ್ರಗತಿಯತ್ತ ಹೆಜ್ಜೆ ಹಾಕುತ್ತಿದೆ ಎಂದು ಭಾವಿಸಲಾಗಿದೆ.